

RNI : KARKAN/2023/88973

# ಮುಂಜಾನೆ ವಾರ್ತೆ

MUNJANEEVARTHE

ಕನ್ನಡ ದಿನಪತ್ರಿಕೆ

E-Paper : www.munjanevarthe.com

EDITOR : H.L. AMARNATH



VOLUME : 04 ISSUE: 66 ಸಂಪುಟ: 04 ಸಂಚಿಕೆ: 66 munjanevarthe SATURDAY 19 SEPTEMBER 2026, 19 ಶನಿವಾರ ಸೆಪ್ಟೆಂಬರ್ 2026 ₹ 2



ರಾಜ್ಯದಲ್ಲಿ ಕ್ರೀಡಾ ವಿಶ್ವವಿದ್ಯಾನಿಲಯ ಸ್ಥಾಪನೆಗೆ ಚಿಂತನೆ : ಡಿಸಿಎಂ ಪರಮೇಶ್ವರ್ — ವಿವರಪುಟ 02

ರಾಜ್ಯದಲ್ಲಿ ಮೋಡ ಬಿತ್ತನೆಗೆ ಎಲ್ಲ ಸಿದ್ಧತೆ ಪೂರ್ಣ; ಸೂಕ್ತ ವಾತಾವರಣಕ್ಕಾಗಿ ಕಾಯುತ್ತಿದ್ದೇವೆ: ಸಿಎಂ ಶಿವಕುಮಾರ್ — ವಿವರಪುಟ 03

ನರ್ಸ್ ಮೇಲಿನ ದಾಳಿ ತಡೆಯಲು ಧೈರ್ಯದಿಂದ ಮಧ್ಯಪ್ರವೇಶಿಸಿದ ಟ್ರಾಫಿಕ್ ಸಬ್‌ಇನ್ಸ್‌ಪೆಕ್ಟರ್‌ವರಿಗೆ ಅಭಿನಂದನೆ — ವಿವರಪುಟ 04



## ನಿಮ್ಮೊಂದಿಗೆ ನಾವಿದ್ದೇವೆ

ಭ್ರಷ್ಟಾಚಾರದ ವಿರುದ್ಧ ನಮ್ಮದು ಅವಿರತ ಹೋರಾಟ. ನಿಮಗೆ ಅಧಿಕಾರಿಗಳ ಕಿರುಕುಳವೇ? ನಿಮ್ಮ ಕೆಲಸಗಳು ಸಕಾಲದಲ್ಲಿ ಅಗುತ್ತಿಲ್ಲವೇ?
ಲಂಚ ಕೇಳುತ್ತಿದ್ದಾರೆಯೇ? ಭ್ರಷ್ಟರ ಬಗ್ಗೆ ನಿಮ್ಮಲ್ಲಿ ಮಾಹಿತಿ ಇದೆಯೇ?
ನಿಮಗೆ ಸಮಸ್ಯೆಗಳಿವೆಯೇ? ಹಾಗಾದರೆ ನಮ್ಮನ್ನು ಸಂಪರ್ಕಿಸಿ ನಿಮ್ಮ ಹೆಸರನ್ನು ಗೌಪ್ಯವಾಗಿಡಲಾಗುವುದು. ಸೂಕ್ತವೆನಿಸಿದರೆ ಪತ್ರಿಕೆಯಲ್ಲಿ ಪ್ರಕಟಿಸಿ ನ್ಯಾಯ ಒದಗಿಸಿಕೊಡಲು ಪ್ರಯತ್ನಿಸಲಾಗುವುದು.
ಸಂಪರ್ಕಿಸಿ: 9663122276


# ಕರಾವಳಿಯಲ್ಲಿ ಕ್ಯಾಬಿನೆಟ್ ಮೀಟಿಂಗ್



ಮಂಗಳೂರು: ದಕ್ಷಿಣ ಕನ್ನಡ ಜಿಲ್ಲೆಯ ಹೆಸರನ್ನು ಮರುನಾಮಕರಣ ಮಾಡಲು, ಕರಾವಳಿ ಪ್ರವಾಸೋದ್ಯಮ ನೀತಿ ಹಾಗೂ ಮಂಗಳೂರಿನಲ್ಲಿ ಐಟಿ ಪಾರ್ಕ್ ನಿರ್ಮಾಣ ಸೇರಿದಂತೆ ಹಲವಾರು ಮಹತ್ವದ ಯೋಜನೆಗಳ ಕುರಿತು ಮಂಗಳೂರಿನಲ್ಲಿಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗಿದೆ.

ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾದ ಬಳಿಕ ಕರಾವಳಿ ಭಾಗದಲ್ಲಿ ನಡೆದ ಮೊದಲ ಸಚಿವ ಸಂಪುಟ ಸಭೆಯಲ್ಲಿ ಕರಾವಳಿ ಪ್ರದೇಶದ ಬಂದರು, ದ್ವೀಪ, ಪ್ರವಾಸೋದ್ಯಮ ಮತ್ತು ಮೂಲಸೌಕರ್ಯಗಳ ಅಭಿವೃದ್ಧಿಗೆ ಒತ್ತು ನೀಡಲಾಗಿದೆ. ಮಂಗಳೂರು, ಉತ್ತರ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಹಲವು ಮಹತ್ವದ ಯೋಜನೆಗಳನ್ನು ಸಾರ್ವಜನಿಕ–ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ಕೈಗೊಳ್ಳಲು ಅನುಮೋದನೆ ನೀಡಿದೆ.

2026ನೇ ಸಾಲಿನ ಸಚಿವ ಸಂಪುಟದ 21ನೇ ಸಭೆಯಲ್ಲಿ ಈ ಕುರಿತು ಹಲವು ಪ್ರಸ್ತಾವನೆಗಳಿಗೆ ಒಪ್ಪಿಗೆ ನೀಡಲಾಗಿದೆ. ವಿಶೇಷವಾಗಿ ಬಂದರು ಮತ್ತು ದ್ವೀಪಗಳ ಅಭಿವೃದ್ಧಿ, ಪ್ರವಾಸೋದ್ಯಮ ಮೂಲಸೌಕರ್ಯಗಳ ಹಾಗೂ ಹಡಗು ನಿರ್ಮಾಣಕ್ಕೆ ಸಂಬಂಧಿಸಿದ ಯೋಜನೆಗಳು ಗಮನ ಸೆಳೆದಿವೆ.

ಮಂಗಳೂರಿನಲ್ಲಿರುವ ಗುರುಪುರ ನದಿ ದ್ವೀಪಗಳನ್ನು ಪಿಪಿಪಿ ಮಾದರಿಯಲ್ಲಿ, ಡಿ.ಬಿ.ಎಫ್.ಒ.ಟಿ ಆಧಾರದ ಮೇಲೆ ಸುಮಾರು 125.43 ಕೋಟಿ ಅಂದಾಜು ವೆಚ್ಚದಲ್ಲಿ ಅಭಿವೃದ್ಧಿಪಡಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಉತ್ತರ ಕನ್ನಡ ಜಿಲ್ಲೆಯ ಕಾರವಾರ, ಭಟ್ಕಳ ಮತ್ತು ಹೊನ್ನಾವರ ತಾಲೂಕುಗಳ ವ್ಯಾಪ್ತಿಯಲ್ಲಿರುವ 7 ದ್ವೀಪಗಳನ್ನು ಸುಮಾರು 307.71 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಅಭಿವೃದ್ಧಿಗೊಳಿಸಲು ನಿರ್ಧರಿಸಲಾಗಿದೆ.

ಮಂಗಳೂರಿನ ಲೈಟ್‌ಹೌಸ್ (ದೀಪಸ್ತಂಭ) ಪ್ರದೇಶದ ಸುತ್ತಮುತ್ತ ಪ್ರವಾಸೋದ್ಯಮ ಮತ್ತು ಆತಿಥ್ಯ ಮೂಲಸೌಕರ್ಯ ಅಭಿವೃದ್ಧಿಪಡಿಸುವ ಯೋಜನೆಯನ್ನು 60.34 ಕೋಟಿ ರೂ.ವೆಚ್ಚದಲ್ಲಿ ಮಾಡಲಾಗುತ್ತಿದೆ.


ಪ್ರಮುಖವಾಗಿ ಉತ್ತರ ಕನ್ನಡ ಜಿಲ್ಲೆಯ ಮಂಕಿ ಬಂದರಿನಲ್ಲಿ ಬಹುಉದ್ದೇಶಿತ ಬಂದರು ಹಾಗೂ ಹಡಗು ನಿರ್ಮಾಣ ಅಂಗಳ ಅಭಿವೃದ್ಧಿಪಡಿಸುವ ಮಹತ್ವಾಕಾಂಕ್ಷಿ ಯೋಜನೆಗೆ ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಡಿ.ಬಿ.ಎಫ್.ಒ.ಟಿ ಪುಟ 2ಕ್ಕೆ

# ಆಸ್ತಿ ತೆರಿಗೆ ಮೇಲೆ ವಿಧಿಸಿರುವ ಸಾಫ್ಟ್ ವೇರ್ ಶುಲ್ಕ ಹಿಂಪಡೆಯಲು ಆಗ್ರಹ

ಬೆಂಗಳೂರು: ರಾಜ್ಯದಲ್ಲಿ ಆಸ್ತಿ ತೆರಿಗೆ ಪಾವತಿದಾರರ ಮೇಲೆ ಸರ್ಕಾರ ಹೊಸದಾಗಿ ಸಾಫ್ಟ್ ವೇರ್ ಶುಲ್ಕದ ಹೊರೆ ಹೊರಿಸಿರುವುದು ಈಗ ಭಾರೀ ರಾಜಕೀಯ ಕಾಳಗಕ್ಕೆ ಕಾರಣವಾಗಿದೆ. ವಸತಿ ಆಸ್ತಿಗಳಿಗೆ ಪ್ರತಿ ಸ್ವತ್ತಿಗೆ 200 ಹಾಗೂ ವಾಣಿಜ್ಯ ಆಸ್ತಿಗಳಿಗೆ 1,000 ಸಾಫ್ಟ್ ವೇರ್ ವೆಚ್ಚವನ್ನು ವಿಧಿಸಿರುವುದನ್ನು ಖಂಡಿಸಿ ಪ್ರತಿಪಕ್ಷ ಬಿಜೆಪಿ, ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದೆ.

ಸರ್ಕಾರದ ತಂತ್ರಜ್ಞಾನ ವ್ಯವಸ್ಥೆ ಮತ್ತು ತಂತ್ರಾಂಶಗಳ ಉನ್ನತೀಕರಣಕ್ಕೆ ಸಾರ್ವಜನಿಕರ ಜೇಬಿನಿಂದ ಏಕಪಕ್ಷೀಯವಾಗಿ ಹಣ ವಸೂಲಿ ಮಾಡುತ್ತಿರುವುದು ಎಷ್ಟು ಸರಿ? ಎಂದು ಬಿಜೆಪಿ ಗಂಭೀರವಾಗಿ ಪ್ರಶ್ನಿಸಿದೆ.

ವಿಧಿಸಲಾಗಿರುವ ಈ ಶುಲ್ಕದ ಸಂಪೂರ್ಣ ವಿವರ (ಬ್ರೇಕ್ ಅಪ್) ಮತ್ತು ಹೊಣೆಗಾರಿಕೆಯನ್ನು ಸಾರ್ವಜನಿಕರ ಮುಂದಿಡಬೇಕು. ಡಿಜಿಟಲೀಕರಣ ಮತ್ತು ಆಡಳಿತ ಸುಧಾರಣೆ ಹೆಸರಿನಲ್ಲಿ ನಾಗರಿಕರ ಮೇಲೆ ಅನಗತ್ಯ ಆರ್ಥಿಕ ಹೊರೆ ಹೇರಲಾಗುತ್ತಿದ್ದು, ತಕ್ಷಣವೇ ಈ ಶುಲ್ಕವನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿದೆ.




ಸರ್ಕಾರದ ಈ ನೂತನ ನಿರ್ಧಾರವನ್ನು ಹಿಂದಿನ ಸರಣಿ ತೆರಿಗೆ ಮತ್ತು ದರ ಏರಿಕೆಗಳೊಂದಿಗೆ ಜೋಡಿಸಿ ಸಾರ್ವಜನಿಕ ವಲಯದಲ್ಲೂ ಅಸಮಾಧಾನ ವ್ಯಕ್ತವಾಗುತ್ತಿದೆ. ಗ್ಯಾರಂಟಿ ಯೋಜನೆಗಳ ನಿರ್ವಹಣೆಯ ನೆಪದಲ್ಲಿ ಇತ್ತೀಚಿನ ತಿಂಗಳುಗಳಲ್ಲಿ ಪೆಟ್ರೋಲ್, ಡೀಸೆಲ್ ಮೇಲಿನ ತೆರಿಗೆ ಮತ್ತು ವಿದ್ಯುತ್ ಶುಲ್ಕಗಳನ್ನು ಹೆಚ್ಚಿಸಲಾಗಿತ್ತು.ಇತ್ತೀಚೆಗಷ್ಟೇ ರಾಜ್ಯಾದ್ಯಂತ ಆಸ್ತಿ ಮಾರ್ಗಸೂಚಿ ದರಗಳನ್ನು ಹೆಚ್ಚಿಸುವ ಮೂಲಕ ನೋಂದಣಿ ಮತ್ತು ಮುದ್ರಾಂಕ ಶುಲ್ಕದ ಹೊರೆ ಹೆಚ್ಚಿಸಲಾಗಿತ್ತು.

ಇದೀಗ ಪಾಲಿಕೆಗಳು ಮತ್ತು ಸ್ಥಳೀಯ ಸಂಸ್ಥೆಗಳ ಇ–ಆಡಳಿತ ಆಪ್‌ಗಳು ಹಾಗೂ ತಂತ್ರಾಂಶಗಳ ನಿರ್ವಹಣೆಗೆ ತೆರಿಗೆದಾರರೇ ಹಣ ನೀಡಬೇಕು ಎನ್ನುವ ಹೊಸ ನಿಯಮ ತಂದಿರುವುದು ಸಾರ್ವಜನಿಕರಲ್ಲಿ ಆಕ್ರೋಶ ಮೂಡಿಸಿದೆ.

ಒಂದೆಡೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ತತ್ತರಿಸಿರುವ ಜನಸಾಮಾನ್ಯರಿಗೆ, ಯಾವುದೇ ಮುನ್ಸೂಚನೆ ಇಲ್ಲದೆ ಆಸ್ತಿ ತೆರಿಗೆಯಲ್ಲಿ ತಂತ್ರಜ್ಞಾನದ ಹೆಸರಿನಲ್ಲಿ ಸಾಫ್ಟ್‌ವೇರ್ ಶುಲ್ಕ ಸೇರಿಸಿರುವುದು ಗಾಯದ ಮೇಲೆ ಬಿಸಿ ತುಪ್ಪ ಸುರಿದಂತಾಗಿದೆ. ಸರ್ಕಾರ ಈ ಜನವಿರೋಧಿ ನಿರ್ಧಾರವನ್ನು ಹಿಂಪಡೆಯದಿದ್ದರೆ ರಾಜ್ಯಾದ್ಯಂತ ಬೃಹತ್ ಪ್ರತಿಭಟನೆ ನಡೆಸುವುದಾಗಿ ವಿರೋಧ ಪಕ್ಷಗಳು ಎಚ್ಚರಿಸಿವೆ.

ಹೊಸ ಶುಲ್ಕದ ಕುರಿತು ಬಿಜೆಪಿ ಮುಖ್ಯವಾಗಿ ಮೂರು ಅಂಶಗಳನ್ನು ಮುಂದಿಟ್ಟಿದ್ದು, 200 ಮತ್ತು 1,000 ಶುಲ್ಕ ನಿಗದಿಪಡಿಸಲು ಬಳಸಿದ ವೆಚ್ಚದ ಲೆಕ್ಕಾಚಾರವೇನು? ಸಾಫ್ಟ್‌ವೇರ್ ಅಭಿವೃದ್ಧಿ, ನಿರ್ವಹಣೆ ಮತ್ತು ತಾಂತ್ರಿಕ ಸೇವೆಗೆ ಒಟ್ಟು ಎಷ್ಟು ಹಣ ಖರ್ಚಾಗುತ್ತಿದೆ? ಈ ವೆಚ್ಚವನ್ನು ಸಾಮಾನ್ಯ ಆಡಳಿತ ವೆಚ್ಚವಾಗಿ ಭರಿಸುವ ಬದಲು ತೆರಿಗೆದಾರರ ಮೇಲೆ ಪ್ರತ್ಯೇಕ ಶುಲ್ಕವಾಗಿ ಹಾಕಿರುವುದಕ್ಕೆ ಕಾರಣವೇನು? ಸರ್ಕಾರ ಬಹಿರಂಗಪಡಿಸಬೇಕು ಅಥವಾ ಶುಲ್ಕವನ್ನು ಹಿಂಪಡೆಯಬೇಕು ಎಂದು ಬಿಜೆಪಿ ಒತ್ತಾಯಿಸಿದೆ.

# ರಾಜ್ಯದಲ್ಲಿ ಚಲನಚಿತ್ರ ಟಿಕೆಟ್ ದರ ಹೆಚ್ಚಳ : ಸೆ.30ರಿಂದ ಶೇ.2ರಷ್ಟು ಸೆಸ್ ಜಾರಿ

ಬೆಂಗಳೂರು: ರಾಜ್ಯದ ಸಿನಿಮಾ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವವರ ಕ್ಷೇಮಾಭಿವೃದ್ಧಿಗಾಗಿ ರೂಪಿಸಲಾಗಿರುವ ಕರ್ನಾಟಕ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ (ಕ್ಷೇಮಾಭಿವೃದ್ಧಿ) ಅಧಿನಿಯಮ, 2024 ಸೆಪ್ಟೆಂಬರ್ 30, 2026ರಿಂದ ಜಾರಿಗೆ ಬರಲಿದೆ.




ಈ ಸಂಬಂಧ ರಾಜ್ಯ ಸರ್ಕಾರ ಸೆಪ್ಟೆಂಬರ್ 10ರಂದು ಅಧಿಸೂಚನೆ ಹೊರಡಿಸಿದೆ. ಇದರೊಂದಿಗೆ ಸಿನಿಮಾ ಟಿಕೆಟ್‌ಗಳು ಸೇರಿದಂತೆ ಅಧಿನಿಯಮದ ವ್ಯಾಪ್ತಿಗೆ ಬರುವ ಆದಾಯದ ಮೇಲೆ ಕನಿಷ್ಠ ಶೇ.1ರಿಂದ ಗರಿಷ್ಠ ಶೇ.2ರವರೆಗೆ ಕ್ಷೇಮಾಭಿವೃದ್ಧಿ ಉಪಕರ (ಸೆಸ್) ವಿಧಿಸುವ ವ್ಯವಸ್ಥೆ ಜಾರಿಗೆ ಬರಲಿದೆ.

ಕರ್ನಾಟಕ ಸರ್ಕಾರದ ಸಚಿವಾಲಯ, ವಿಕಾಸಸೌಧದಿಂದ ಹೊರಡಿಸಿರುವ ಅಧಿಸೂಚನೆಯಲ್ಲಿ, 2024ರ ಕರ್ನಾಟಕ ಪುಟ 2ಕ್ಕೆ

# ಸಾರಿಗೆ ಸೇವೆಗೆ ಡಿಜಿಟಲ್ ಸ್ಪರ್ಶ

## ಕೌಂಟರ್‌ನಿಂದ ಮೊಬೈಲ್ ತಲುಪಿದ ಟಿಕೆಟ್ ಸೇವೆ

ಟಿಕೆಟ್ ಕಾಯ್ದಿರಿಸುವುದರಿಂದ ರದ್ದತಿಯವರೆಗೆ ಹಲವು ಸೇವೆಗಳು ಈಗ ಒಂದೇ ವೇದಿಕೆಯಲ್ಲಿ ಲಭ್ಯವಾಗಲಿದೆ. ಅದರಲ್ಲೂ ವಾಟ್ಸಾಪ್‌ನಲ್ಲೇ ಬಸ್ ಟಿಕೆಟ್ ಕಾಯ್ದಿರಿಸುವ ಸೌಲಭ್ಯದಿಂದ ಕೆಎಸ್‌ಆರ್‌ಟಿಸಿ ಸೇವೆ ಪ್ರಯಾಣಿಕರ ಕೈಬೆರಳ ತುದಿಗೆ ಬಂದಿದೆ.

ಸಾರಿಗೆ ಸೇವೆ ಪಡೆಯಲು ಇನ್ನು ಮುಂದೆ ಕೌಂಟರ್‌ಗೆ ತೆರಳಿ ಸರತಿ ಸಾಲಿನಲ್ಲಿ ನಿಲ್ಲಬೇಕಾದ ಅನಿವಾರ್ಯತೆ ಕ್ರಮೇಣ ಕಡಿಮೆಯಾಗುತ್ತಿದೆ. ಮೊಬೈಲ್‌ನಲ್ಲೇ ಟಿಕೆಟ್ ಬುಕ್ ಮಾಡುವುದು, ಪಾವತಿ ಮಾಡುವುದು, ಇ–ಟಿಕೆಟ್ ಪಡೆಯುವುದು, ಅಗತ್ಯವಿದ್ದರೆ ಟಿಕೆಟ್ ರದ್ದುಪಡಿಸುವುದು ಇವೆಲ್ಲವೂ ಡಿಜಿಟಲ್ ಮೂಲಕವೇ ಸಾಧ್ಯವಾಗುತ್ತಿದೆ.

ಸಾರಿಗೆ ಸೇವೆ ಜನರ ಬಳಿಗೆ ಹೋಗುವುದಲ್ಲ. ಈಗ ಸಾರಿಗೆ ಸೇವೆಯೇ ಜನರ ಮೊಬೈಲ್‌ಗೆ ಬರುತ್ತಿದೆ ಎಂಬ ಹೊಸ ಪರಿಕಲ್ಪನೆಯೊಂದಿಗೆ ಕರ್ನಾಟಕವು ಸಾರ್ವಜನಿಕ ಸಾರಿಗೆಯನ್ನು ಮತ್ತಷ್ಟು ಸರಳ ಮತ್ತು ಪ್ರಯಾಣಿಕ ಸ್ನೇಹಿಯಾಗಿಸುವತ್ತ ಹೆಜ್ಜೆ ಇಡುತ್ತಿದೆ.ಈ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ) ವಾಟ್ಸಾಪ್ ಆಧಾರಿತ ಮುಂಗಡ ಟಿಕೆಟ್ ಬುಕ್ಕಿಂಗ್ ವ್ಯವಸ್ಥೆಯನ್ನು ಪರಿಚಯಿಸುತ್ತಿದೆ. ಜನರು ಪ್ರತಿದಿನ ಬಳಸುವ ವಾಟ್ಸಆಯಪ್ ವೇದಿಕೆಯಲ್ಲೇ ಬಸ್ ಟಿಕೆಟ್ ಕಾಯ್ದಿರಿಸುವ ಅವಕಾಶ ದೊರೆಯುವುದರಿಂದ, ಸಾರ್ವಜನಿಕ ಸಾರಿಗೆ ಸೇವೆ ಮತ್ತಷ್ಟು ಸುಲಭವಾಗಿ ಜನರ ಕೈಗೆ ತಲುಪಲಿದೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ) ವಾಟ್ಸಾಪ್ ಆಧಾರಿತ ಮುಂಗಡ ಟಿಕೆಟ್ ಬುಕ್ಕಿಂಗ್ ವ್ಯವಸ್ಥೆಯನ್ನು ಪರಿಚಯಿಸುತ್ತಿದೆ. ಜನರು ಪ್ರತಿದಿನ ಬಳಸುವ ವಾಟ್ಸಾಪ್ ವೇದಿಕೆಯಲ್ಲೇ ಬಸ್ ಟಿಕೆಟ್ ಕಾಯ್ದಿರಿಸುವ ಅವಕಾಶ ದೊರೆಯುವುದರಿಂದ, ಸಾರ್ವಜನಿಕ ಸಾರಿಗೆ ಸೇವೆ ಮತ್ತಷ್ಟು ಸುಲಭವಾಗಿ ಜನರ ಕೈಗೆ ತಲುಪಲಿದೆ.




ರಾಜ್ಯದ ಸಾರ್ವಜನಿಕ ಸಾರಿಗೆ ವ್ಯವಸ್ಥೆಯನ್ನು ಮತ್ತಷ್ಟು ಸಮಗ್ರಗೊಳಿಸುವ ಉದ್ದೇಶದಿಂದ ಒಂದು ಕರ್ನಾಟಕ ಮೊಬಿಲಿಟಿ ಆಪ್ ಅಭಿವೃದ್ಧಿಪಡಿಸಲಾಗಿದೆ. ಈ ವೇದಿಕೆಯಲ್ಲಿ ರಾಜ್ಯದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ), ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (ಎನ್‌ಡಬ್ಲ್ಯೂಕೆಆರ್‌ಟಿಸಿ), ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಕೆಕೆಆರ್‌ಟಿಸಿ) ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ) ಈ ನಾಲ್ಕು ಪ್ರಮುಖ ಸಾರಿಗೆ ಸಂಸ್ಥೆಗಳನ್ನು ಒಗ್ಗೂಡಿಸುವ ವ್ಯವಸ್ಥೆ ರೂಪಿಸಲಾಗಿದೆ.

30 ದಿನಗಳ ಮುಂಚಿತವಾಗಿ ಟಿಕೆಟ್ ಕಾಯ್ದಿರಿಸಿ ಪ್ರಯಾಣಿಕರು ತಮ ಪ್ರಯಾಣವನ್ನು ಮುಂಚಿತವಾಗಿಯೇ ಯೋಜಿಸಿಕೊಳ್ಳಲು 30 ದಿನಗಳ ಮುಂಚಿತವಾಗಿ ಟಿಕೆಟ್ ಕಾಯ್ದಿರಿಸುವ ಅವಕಾಶವಿದೆ. ದೂರದ ಪ್ರಯಾಣ, ಕುಟುಂಬದೊಂದಿಗೆ ಪ್ರವಾಸ, ಹಬ್ಬ–ಹರಿದಿನಗಳ ಪ್ರಯಾಣ ಅಥವಾ ಮುಂಚಿತ ಯೋಜನೆ ಅಗತ್ಯವಿರುವ ಸಂದರ್ಭಗಳಲ್ಲಿ ಈ ಸೌಲಭ್ಯ ಹೆಚ್ಚು ಅನುಕೂಲಕರವಾಗಲಿದೆ.

ಟಿಕೆಟ್ ಬುಕ್ಕಿಂಗ್ ಸಂದರ್ಭದಲ್ಲಿ ಯುಪಿಐ ಕ್ರೆಡಿಟ್ ಕಾರ್ಡ್, ಡೆಬಿಟ್ ಕಾರ್ಡ್ ಹಾಗೂ ವಾಲೆಟ್ ಸೇರಿದಂತೆ ವಿವಿಧ ಡಿಜಿಟಲ್ ಪಾವತಿ ವಿಧಾನಗಳನ್ನು ಬಳಸಬಹುದು.

# ದೇಶದೆಲ್ಲೆಡೆ ಮುಂಗಾರು ಕುಸಿತ, ಆಹಾರ ಪದಾರ್ಥಗಳ ಬೆಲೆ ಏರಿಕೆ ಸಾಧ್ಯತೆ

ನವದೆಹಲಿ: ಎಲ್ ನಿನೊ ಪರಿಣಾಮ ದೇಶದಲ್ಲಿ ಕಳೆದ 17 ವರ್ಷಗಳಲ್ಲಿಯೇ ಅತ್ಯಂತ ಕಡಿಮೆ ಮಳೆಯಾಗಿದೆ. ಹೀಗಾಗಿ ಭಾರತದ ಮುಂಗಾರು ಮಳೆಯು ಸರಾಸರಿಗಿಂತ 15% ಕಡಿಮೆಯಿದ್ದು, 2009ರ ನಂತರದ ಅತ್ಯಂತ ಕಡಿಮೆ ಮಳೆಯಾಗುವ ಅಪಾಯವನ್ನು ಎದುರಿಸುತ್ತಿದೆ.

ಬಲಗೊಳ್ಳುತ್ತಿರುವ ಎಲ್ ನಿನೊ ಮಳೆಯನ್ನು ತಡೆಯುತ್ತಿರುವುದರಿಂದ, ಭಾರತವು ಕಳೆದ 17 ವರ್ಷಗಳಲ್ಲಿಯೇ ಅತ್ಯಂತ ಕಡಿಮೆ ಮಳೆಯಾಗುವ ಮುಂಗಾರು ಹಾದಿಯಲ್ಲಿದೆ. ಇದು ಬೆಳೆ ಇಳುವರಿಯ ಮೇಲೆ ಪರಿಣಾಮ ಬೀರಬಹುದು ಮತ್ತು ಆಹಾರ ಪದಾರ್ಥಗಳ ಬೆಲೆ ಏರಿಕೆಯ ಅಪಾಯವನ್ನು ಹೆಚ್ಚಿಸಬಹುದು.

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ, ಜೂನ್‌ನಿಂದ ಸೆಪ್ಟೆಂಬರ್ ಅವಧಿಯ ಮುಂಗಾರು



ಮಳೆಗಾಲದಲ್ಲಿ ಇಲ್ಲಿಯವರೆಗಿನ ಒಟ್ಟು ಮಳೆಯ ಪ್ರಮಾಣವು ದೀರ್ಘಕಾಲೀನ ಸರಾಸರಿಗಿಂತ 15% ಕಡಿಮೆಯಿದೆ.

ಈ ಕೊರತೆಯು ಮುಂದುವರಿದರೆ, ಇದು 2009ರ ನಂತರದ ಅತ್ಯಂತ ದುರ್ಬಲ ಮುಂಗಾರು ಆಗಲಿದೆ; ಆಗ ಮಳೆಯ ಪ್ರಮಾಣವು ಸಾಮಾನ್ಯಕ್ಕಿಂತ 18% ಕಡಿಮೆಯಿತ್ತು.

ಹವಾಮಾನ ಇಲಾಖೆಯು ಮೇ ತಿಂಗಳಲ್ಲೇ ಈ ಋತುವಿನಲ್ಲಿ 10% ರಷ್ಟು ಮಳೆಯ ಕೊರತೆಯಾಗಬಹುದು ಎಂದು ಮುನ್ಸೂಚನೆ ನೀಡಿತ್ತು.ಸೆಪ್ಟೆಂಬರ್‌ನ ಕೊನೆಯ ವಾರದಲ್ಲಿ ಬಂಗಾಳ ಕೊಲ್ಲಿಯಲ್ಲಿ ಉಷ್ಣವಲಯದ ಚಂಡಮಾರುತ ಉಂಟಾಗಲು ಅನುಕೂಲಕರ ಪರಿಸ್ಥಿತಿಗಳು ನಿರ್ಮಾಣವಾಗಬಹುದು ಎಂದು ಆಸ್ಟ್ರೇಲಿಯಾ ಮೂಲದ ಸಲಹಾ ಸಂಸ್ಥೆ ಗ್ಲೋಬಲ್ ವೆದರ್ ಕ್ಲೈಮೇಟ್ ಅನಾಲಿಟಿಕ್ಸ್‌ನ ವ್ಯವಸ್ಥಾಪಕ ನಿರ್ದೇಶಕ ಕ್ರಿಶ್ಚಿಯನ್ ವರ್ನರ್ ಹೇಳಿದ್ದಾರೆ.ಇದು ಪೂರ್ವ ಮತ್ತು ಈಶಾನ್ಯ ಭಾರತಕ್ಕೆ ಅತ್ಯಗತ್ಯ ಮಳೆಯನ್ನು ತರುವ ಮೂಲಕ ಅಲ್ಲಿನ ಮಳೆಯ ಕೊರತೆಯನ್ನು ತಗ್ಗಿಸಬಹುದು ಎಂದು ಅವರು ಹೇಳಿದರು. ಪುಟ 2ಕ್ಕೆ


ಜಗತ್ತಿನ ಯಾವುದೇ ಮೂಲೆಯಲ್ಲಿ ಕುಳಿತು ಮುಂಜಾನೆವಾರ್ತೆ ಓದಿ...

www.munjanevarthe.com

ಮುಂಜಾನೆವಾರ್ತೆ ಕನ್ನಡ ದಿನಪತ್ರಿಕೆ ಓದುವುದು ಈಗ ಮತ್ತಷ್ಟು ಸುಲಭ

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಶನಿವಾರ 19 ಸೆಪ್ಟೆಂಬರ್ 2026
SATURDAY 19 SEPTEMBER 2026

# ರಾಜ್ಯದಲ್ಲಿ ಚಲನಚಿತ್ರ ಟಿಕೆಟ್ ದರ ಹೆಚ್ಚಳ : ಸೆ.30ರಿಂದ ಶೇ.2ರಷ್ಟು ಸೆಸ್ ಜಾರಿ

ಪುಟ 1ರಿಂದ ಅಧಿನಿಯಮ ಸಂಖ್ಯೆ 46ರ ಪ್ರಕರಣ 1(2)ರಡಿ ನೀಡಿರುವ ಅಧಿಕಾರವನ್ನು ಚಲಾಯಿಸಿ ಕಾಯ್ದೆಯ ಎಲ್ಲ ಉಪಬಂಧಗಳು 30/09/2026ರಿಂದ ಜಾರಿಗೆ ಬರಲಿವೆ ಎಂದು ತಿಳಿಸಲಾಗಿದೆ.

**ಎರಡು ವರ್ಷಗಳ ಬಳಿಕ ಕಾಯ್ದೆ ಜಾರಿ**

ಸಿನಿಮಾ ಹಾಗೂ ಸಾಂಸ್ಕೃತಿಕ ಕ್ಷೇತ್ರದ ಕಾರ್ಮಿಕರು ಮತ್ತು ಕಾರ್ಯಕರ್ತರ ಸಾಮಾಜಿಕ ಭದ್ರತೆ ಹಾಗೂ ಕ್ಷೇಮಾಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ರಾಜ್ಯ ಸರ್ಕಾರ 2024ರಲ್ಲಿ ಈ ಸಂಬಂಧ ವಿಧೇಯಕವನ್ನು ಮಂಡಿಸಿತ್ತು. ವಿಧಾನಮಂಡಲದ ಅಂಗೀಕಾರದ ಬಳಿಕ 2024ರ ಸೆಪ್ಟೆಂಬರ್ 23ರಂದು ರಾಜ್ಯಪಾಲರು ವಿಧೇಯಕಕ್ಕೆ ಅಂಕಿತ ಹಾಕಿದ್ದರು. ಮರುದಿನ, ಸೆಪ್ಟೆಂಬರ್ 24ರಂದು ವಿಶೇಷ ರಾಜ್ಯಪತ್ರದಲ್ಲಿ ಕಾಯ್ದೆಯನ್ನು ಪ್ರಕಟಿಸಲಾಗಿತ್ತು.

ಆದರೆ ಕಾಯ್ದೆ ಅಂಗೀಕಾರಗೊಂಡು ಸುಮಾರು ಎರಡು ವರ್ಷಗಳ ಬಳಿಕ ಇದೀಗ ಅದರ ಉಪಬಂಧಗಳನ್ನು ಜಾರಿಗೆ ತರಲು ಸರ್ಕಾರ ದಿನಾಂಕ ನಿಗದಿಪಡಿಸಿದೆ. ಸೆಪ್ಟೆಂಬರ್ 30ರಿಂದ ಕಾಯ್ದೆ ಜಾರಿಗೆ ಬರುವುದರಿಂದ ಇದರಡಿ ಸೆಸ್ ಸಂಗ್ರಹಿಸುವ ವ್ಯವಸ್ಥೆಯೂ ಕಾರ್ಯರೂಪಕ್ಕೆ ಬರಲಿದೆ.

ಶೇ.1ರಿಂದ ಶೇ.2ರವರೆಗೆ ಸೆಸ್

ಅಧಿನಿಯಮದ ಪ್ರಮುಖ ಅಂಶವೆಂದರೆ ಸಿನಿ ಮತ್ತು ಸಾಂಸ್ಕೃತಿಕ ಕಾರ್ಯಕರ್ತರ ಕ್ಷೇಮಾಭಿವೃದ್ಧಿ ಉಪಕರಣ ಸಂಗ್ರಹ. ಸರ್ಕಾರ ಅಧಿಸೂಚನೆಯ ಮೂಲಕ ನಿಗದಿಪಡಿಸುವ ದರದಲ್ಲಿ ಈ ಉಪಕರವನ್ನು ವಿಧಿಸಬಹುದಾಗಿದೆ. ಕಾಯ್ದೆಯ ಪ್ರಕಾರ, ಸರ್ಕಾರ ಅಧಿಸೂಚಿಸುವ ಸಿನಿಮಾ ಟಿಕೆಟ್‌ಗಳು, ವಂತಿಗೆ ಶುಲ್ಕಗಳು ಹಾಗೂ ಸಂಬಂಧಿತ ಸಂಸ್ಥೆಗಳಿಂದ ಸೃಜಿಸಲ್ಪಡುವ ಆದಾಯದ ಮೇಲೆ ಸೆಸ್ ವಿಧಿಸಲು ಅವಕಾಶವಿದೆ. ಈ ದರ ಶೇ.1ಕ್ಕಿಂತ ಕಡಿಮೆಯಿರಬಾರದು ಮತ್ತು ಶೇ.2ಕ್ಕಿಂತ ಹೆಚ್ಚಿರಬಾರದು ಎಂಬ ಮಿತಿ ನಿಗದಿಪಡಿಸಲಾಗಿದೆ. ಹೀಗಾಗಿ ಸರ್ಕಾರ ಗರಿಷ್ಠ ದರವಾದ ಶೇ.2ನ್ನು ಅನ್ವಯಿಸಿದಲ್ಲಿ ಸಿನಿಮಾ ಟಿಕೆಟ್ ದರದ ಮೇಲೆ ಹೆಚ್ಚುವರಿ ಮೊತ್ತ ಪಾವತಿಸಬೇಕಾಗುತ್ತದೆ. ಉದಾಹರಣೆಗೆ, ಸೆಸ್ ಲೆಕ್ಕಕ್ಕೆ ಒಳಪಡುವ ಟಿಕೆಟ್ ಮೊತ್ತ 200 ಆಗಿದ್ದರೆ, ಶೇ.2ರ ದರದಲ್ಲಿ 4 ಹೆಚ್ಚುವರಿ ಉಪಕರವಾಗುತ್ತದೆ. ಆದರೆ ಅಂತಿಮವಾಗಿ ಯಾವ ದರವನ್ನು ಅನ್ವಯಿಸಲಾಗುತ್ತದೆ ಎಂಬುದು ಸರ್ಕಾರದ ಸಂಬಂಧಿತ ಅಧಿಸೂಚನೆಗೆ ಒಳಪಟ್ಟಿರುತ್ತದೆ.

ಮೂರು ವರ್ಷಕ್ಕೊಮ್ಮೆ ಟಿಕೆಟ್ ದರ ಪರಿಷ್ಕರಣೆಗೆ: ಕಾಯ್ದೆಯಲ್ಲಿ ಮತ್ತೊಂದು ಪ್ರಮುಖ ಅಂಶವೆಂದರೆ ಸಿನಿಮಾ ಟಿಕೆಟ್ ದರವನ್ನು ಮೂರು ವರ್ಷಗಳಿಗೊಮ್ಮೆ ಅಧಿಸೂಚನೆಯ ಮೂಲಕ ಪರಿಷ್ಕರಿಸಲು ಸರ್ಕಾರಕ್ಕೆ ಅವಕಾಶ ನೀಡಿರುವುದು. ಆದರೆ ಸೆಸ್ ಲೆಕ್ಕಾಚಾರದ ಉದ್ದೇಶಕ್ಕಾಗಿ ಸಿನಿಮಾ ಟಿಕೆಟ್ ದರಟದಲ್ಲಿ ಪಾವತಿಸಿದ ಅಥವಾ ಪಾವತಿಸಬೇಕಾದ ಯಾವುದೇ ತೆರಿಗೆಯನ್ನು ಸೇರಿಸಬಾರದು ಎಂದು ಕಾಯ್ದೆಯಲ್ಲಿ ಸ್ಪಷ್ಟಪಡಿಸಲಾಗಿದೆ.ಇದರ ಪರಿಣಾಮವಾಗಿ ಸಿನಿಮಾ ಟಿಕೆಟ್ ದರ, ತೆರಿಗೆ ಮತ್ತು ಕ್ಷೇಮಾಭಿವೃದ್ಧಿ ಸೆಸ್ ನಡುವಿನ ಲೆಕ್ಕಾಚಾರ ಪ್ರತ್ಯೇಕವಾಗಿರಲಿದೆ.

ಯಾರ ಕ್ಷೇಮಾಭಿವೃದ್ಧಿಗಾಗಿ?: ಸಿನಿಮಾ ನಿರ್ಮಾಣ, ಪ್ರದರ್ಶನ ಮತ್ತು ಸಾಂಸ್ಕೃತಿಕ ಚಟುವಟಿಕೆಗಳ ಹಿಂದೆ ದೊಡ್ಡ ಪ್ರಮಾಣದಲ್ಲಿ ವಿವಿಧ ವರ್ಗದ ಕಾರ್ಯಕರ್ತರು ದುಡಿಯುತ್ತಿದ್ದಾರೆ. ನಟ-ನಟಿಯರಿಂದ ಹಿಡಿದು ತಾಂತ್ರಿಕ ಸಿಬ್ಬಂದಿ, ಕಲಾವಿದರು ಹಾಗೂ ಸಾಂಸ್ಕೃತಿಕ ಕ್ಷೇತ್ರದ ವಿವಿಧ ಕಾರ್ಯಕರ್ತರ ಕ್ಷೇಮಾಭಿವೃದ್ಧಿಗೆ ನೆರವಾಗುವ ಉದ್ದೇಶದಿಂದ ಈ ಕಾನೂನು ರೂಪಿಸಲಾಗಿದೆ. ಸೆಸ್ ಮೂಲಕ ಸಂಗ್ರಹವಾಗುವ ಹಣವನ್ನು ಕಾಯ್ದೆಯ ಉದ್ದೇಶಕ್ಕೆ ಅನುಗುಣವಾಗಿ ಬಳಸುವ ವ್ಯವಸ್ಥೆ ರೂಪುಗೊಳ್ಳಬೇಕಿದೆ. ಹೀಗಾಗಿ ಕಾಯ್ದೆ ಜಾರಿಯೊಂದಿಗೆ ಸೆಸ್‌ನಿಂದ ಎಷ್ಟು ಆದಾಯ ಸಂಗ್ರಹವಾಗಲಿದೆ, ಅದನ್ನು ಯಾವ ವರ್ಗದ ಕಾರ್ಯಕರ್ತರಿಗೆ ಯಾವ ರೀತಿಯಲ್ಲಿ ತಲುಪಿಸಲಾಗುತ್ತದೆ ಮತ್ತು ಕಲ್ಯಾಣ ಯೋಜನೆಗಳ ಸ್ವರೂಪವೇನು ಎಂಬುದು ಮುಂದಿನ ದಿನಗಳಲ್ಲಿ ಪ್ರಮುಖವಾಗಲಿದೆ.

ಪ್ರೇಕ್ಷಕರಿಗೆ ಹೆಚ್ಚುವರಿ ಹೊರೆ?

ಈಗಾಗಲೇ ಸಿನಿಮಾ ಟಿಕೆಟ್ ದರ, ಜಿಎಸ್‌ಟಿ ಸೇರಿದಂತೆ ವಿವಿಧ ಶುಲ್ಕಗಳ ಬಗ್ಗೆ ಪ್ರೇಕ್ಷಕರಲ್ಲಿ ಚರ್ಚೆ ನಡೆಯುತ್ತಿರುವ ಸಂದರ್ಭದಲ್ಲಿ ಹೊಸ ಕ್ಷೇಮಾಭಿವೃದ್ಧಿ ಸೆಸ್ ಜಾರಿಗೆ ಬರುತ್ತಿದೆ.

ಗರಿಷ್ಠ ಶೇ.2ರ ಸೆಸ್ ಅನ್ನು ವಿಧಿಸಿದರೆ

# ಕರಾವಳಿಯಲ್ಲಿ ಕ್ಯಾಬಿನೆಟ್ ಮೀಟಿಂಗ್

ಪುಟ 1ರಿಂದ ಮಾದರಿಯ ಈ ಯೋಜನೆಯ ಅಂದಾಜು ವೆಚ್ಚ 6,925 ಕೋಟಿ ರೂಪಾಯಿ ಎಂದು ಹೇಳಲಾಗಿದೆ. ಉಡುಪಿ ಜಿಲ್ಲೆಯ ಅಯಬಾ, ದರಿಯಾ ಬಹದ್ದೂರ್ ಗಢ ಹಾಗೂ ಮಲ್ಪೆ ದ್ವೀಪಗಳನ್ನು ಪರಿಸರ ಪ್ರವಾಸೋದ್ಯಮ ತಾಣಗಳಾಗಿ ಅಭಿವೃದ್ಧಿಪಡಿಸಲು ಅನುಮೋದನೆ ನೀಡಲಾಗಿದೆ. ಇದಕ್ಕಾಗಿ ಸುಮಾರು 279.03 ಕೋಟಿ ರೂ.ಗಳ ವೆಚ್ಚ ಅಂದಾಜಿಸಲಾಗಿದೆ.

ಕಾರವಾರ ವಿಮಾನ ನಿಲ್ದಾಣ ಅಭಿವೃದ್ಧಿ ಯೋಜನೆಯ ವೆಚ್ಚವನ್ನು 98.24 ಕೋಟಿಯಿಂದ 250.05 ಕೋಟಿ ರೂ.ಗೆ ಹೆಚ್ಚಿಸಿ ಪರಿಷ್ಕೃತ ಆಡಳಿತಾತ್ಮಕ ಅನುಮೋದನೆ ನೀಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದಂತೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಹಲವು ರಸ್ತೆ ಹಾಗೂ ಸೇತುವೆ ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿದೆ. ಮಂಗಳೂರು, ಮೂಡುಬಿದ್ರೆ, ಬಂಟ್ವಾಳ ಸೇರಿದಂತೆ ವಿವಿಧ ಪ್ರದೇಶಗಳ ರಸ್ತೆ ಸಂಪರ್ಕ ಸುಧಾರಣೆಗೆ ಒಟ್ಟು ಹಲವು ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳನ್ನು ಕೈಗೊಳ್ಳಲು ನಿರ್ಧರಿಸಲಾಗಿದೆ.

ಉತ್ತರ ಕನ್ನಡ ಜಿಲ್ಲೆಯ ಕರಾವಳಿ ಪ್ರದೇಶದ ಒಳನಾಡು ಜಲಸಾರಿಗೆ ಅಭಿವೃದ್ಧಿಗೆ ಸಂಬಂಧಿಸಿದಂತೆ ಕರ್ನಾಟಕದ ಒಳನಾಡು ಹಡಗುಗಳ (ದಂಡನೆ ಮತ್ತು ಮೇಲ್ಮನವಿ) ನಿಯಮಗಳು, 2026ಕ್ಕೆ ಅನುಮೋದನೆ ನೀಡುವ ಪ್ರಸ್ತಾವನೆಗೂ ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಕೇಂದ್ರ ಸರ್ಕಾರದ ಯೋಜನೆಯಡಿ ರಾಜ್ಯದಲ್ಲಿ ಹೊಸದಾಗಿ ಆರಂಭಿಸಲಾಗಿರುವ ಗ್ರಾಮ ಗ್ರಂಥಾಲಯಗಳಿಗೆ ಕಂಪ್ಯೂಟರ್ ಮತ್ತು ಯುಪಿಎಸ್ ಸೇರಿದಂತೆ ಅಗತ್ಯ ಯಂತ್ರೋಪಕರಣಗಳನ್ನು ಖರೀದಿಸಿ ಒದಗಿಸಲು 57.15 ಕೋಟಿ ರೂ.ಗಳ ಅಂದಾಜು ವೆಚ್ಚದ ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲೂಕಿನಲ್ಲಿ ಮಳವೂರು ಸೇರಿದಂತೆ 10 ಗ್ರಾಮಗಳಿಗೆ 11.40 ಕೋಟಿ ವೆಚ್ಚದಲ್ಲಿ, ಬಂಟ್ವಾಳ ತಾಲೂಕಿನ ಕರೋಪಾಡಿ ಮತ್ತು ಇತರೆ 79 ಜನವಸತಿಗಳಿಗೆ 12.36 ಕೋಟಿ ರೂಪಾಯಿ ವೆಚ್ಚದಲ್ಲಿ, ಸಂಗಬೆಟ್ಟು ಮತ್ತು ಇತರೆ 65 ಜನವಸತಿಗಳಿಗೆ 14.90 ಕೋಟಿ ರೂಪಾಯಿ ವೆಚ್ಚದಲ್ಲಿ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ ಎರಡು ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ.

ಒಟ್ಟಾರೆ, ಸಚಿವ ಸಂಪುಟದ ಈ ನಿರ್ಧಾರಗಳಲ್ಲಿ ಕರಾವಳಿ ಕರ್ನಾಟಕದ ಬಂದರು, ದ್ವೀಪ, ಪ್ರವಾಸೋದ್ಯಮ, ವಿಮಾನ ನಿಲ್ದಾಣ, ರಸ್ತೆ ಸಂಪರ್ಕ ಹಾಗೂ ಕುಡಿಯುವ ನೀರಿನ ಮೂಲಸೌಕರ್ಯಕ್ಕೆ ಸಂಬಂಧಿಸಿದ ಹಲವು ಯೋಜನೆಗಳಿಗೆ ಆದ್ಯತೆ ನೀಡಲಾಗಿದೆ.

# ದೇಶದೆಲ್ಲೆಡೆ ಮುಂಗಾರು ಕುಸಿತ, ಆಹಾರ ಪದಾರ್ಥಗಳ ಬೆಲೆ ಏರಿಕೆ ಸಾಧ್ಯತೆ

ಪುಟ 1ರಿಂದ ಆದಾಗ್ಯೂ, ಈ ಚಂಡಮಾರುತವು ರಾಷ್ಟ್ರಮಟ್ಟದ ಒಟ್ಟಾರೆ ಪರಿಸ್ಥಿತಿಯಲ್ಲಿ ಗಮನಾರ್ಹ ಬದಲಾವಣೆಯನ್ನು ತರುವ ಸಾಧ್ಯತೆಯಿಲ್ಲ ಮತ್ತು ಕಾಲೋಚಿತ ಮಳೆಯ ಕೊರತೆಯು 13% ರಿಂದ 16% ರ ನಡುವೆ ಇರಲಿದೆ ಎಂದು ವರ್ನರ್ ನಿರೀಕ್ಷಿಸುತ್ತಾರೆ. ಹವಾಮಾನ ಮುನ್ಸೂಚನೆಗಾರರು ಮತ್ತು ಶಿಕ್ಷಣ ತಜ್ಞರು ಯುಕೆಯ ಲ್ಯಾಂಕಾಸ್ಟರ್ ವಿಶ್ವವಿದ್ಯಾಲಯದಲ್ಲಿರುವ ಕ್ರೂಷಿಯಲ್ ಎಂಬ ವಿಶೇಷ ಮುನ್ಸೂಚನಾ ವೇದಿಕೆಯ ಮೂಲಕ ಭಾರತದ ಮುಂಗಾರು ಮಳೆಯ ಬಗ್ಗೆ ಅಂದಾಜುಗಳನ್ನು ಮಾಡುತ್ತಿದ್ದಾರೆ. ಮುಂಗಾರು ಮುಕ್ತಾಯಕ್ಕೆ ಎರಡು ವಾರಗಳಿಗಿಂತ ಕಡಿಮೆ ಸಮಯ ಉಳಿದಿರುವಾಗ, ಈ ಋತುವು 10% ರಿಂದ 20% ರಷ್ಟು ಮಳೆಯ ಕೊರತೆಯೊಂದಿಗೆ ಕೊನೆಗೊಳ್ಳುವ ಸಾಧ್ಯತೆ 68% ರಷ್ಟಿದೆ ಎಂದು ವೇದಿಕೆಯ ಸ್ಥಾಪಕ ಮತ್ತು ಗ್ರಹ ವಿಜ್ಞಾನಿ ಮಾರ್ಕ್ ರೌಲ್‌ಸ್ಟನ್ ತಿಳಿಸಿದ್ದಾರೆ.ಅಕ್ಕಿ, ಸಕ್ಕರೆ ಮತ್ತು ಹತ್ತಿ ಉತ್ಪಾದನೆಯಲ್ಲಿ ವಿಶ್ವದ ಪ್ರಮುಖ ರಾಷ್ಟ್ರಗಳಲ್ಲಿ ಒಂದಾಗಿರುವ ಭಾರತದಲ್ಲಿ, ತಮ್ಮ ಜಮೀನುಗಳಿಗೆ ನೀರಾವರಿಗಾಗಿ ಮಳೆಗಾಲದ ಮಳೆಯನ್ನೇ ಅವಲಂಬಿಸಿರುವ ಕೋಟ್ಯಂತರ ರೈತರಿಗೆ ಸಮರ್ಪಕ ಮುಂಗಾರು ಮಳೆ ಅತ್ಯಗತ್ಯವಾಗಿದೆ. ಭಾರತದ ವಾರ್ಷಿಕ ಮಳೆಯ ಬಹುಪಾಲು ಈ ಮಳೆಗಾಲದಲ್ಲೇ ಲಭ್ಯವಾಗುತ್ತದೆ. ಮಳೆಯ ಕೊರತೆಯು ದೀರ್ಘಕಾಲ ಮುಂದುವರಿದರೆ, ಅದು ಪ್ರಸ್ತುತ ಬೆಳೆ ಹಾಗೂ ಮುಂದಿನ ಬೆಳೆ ಚಕ್ರದ ಮೇಲೆ ಪ್ರತಿಕೂಲ ಪರಿಣಾಮ ಬೀರಬಹುದು. ಇದು ಈಗಾಗಲೇ ಏರಿಕೆಯಾಗುತ್ತಿರುವ ಆಹಾರ ಪದಾರ್ಥಗಳ ಬೆಲೆಗಳ ಮೇಲಿನ ಒತ್ತಡವನ್ನು ಇನ್ನಷ್ಟು ಹೆಚ್ಚಿಸಬಹುದು; ಆಗಸ್ಟ್‌ನಲ್ಲಿ ಆಹಾರದ ಬೆಲೆಗಳು ಸತತ ಏಳನೇ ತಿಂಗಳಿಗೂ ಏರಿಕೆಯಾಗಿ ಶೇ. 5.95 ರಷ್ಟನ್ನು ತಲುಪಿದ್ದು, ಇದು ಈ ವರ್ಷದ ಗರಿಷ್ಠ ಮಟ್ಟವಾಗಿದೆ. ಕ್ವಾಂಟ್-ಇಕೋ ಸಂಸ್ಥೆಯ ಅರ್ಥಶಾಸ್ತ್ರಜ್ಞೆ ಯುವಿಕಾ ಸಿಂಘಾಲ್ ಅವರ ಪ್ರಕಾರ, ಮುಂಗಾರು ಮಳೆ ಕೊರತೆಯಾದಾಗ, ಸಾಮಾನ್ಯ ಮಟ್ಟಕ್ಕಿಂತ ಮಳೆಯ ಪ್ರಮಾಣದಲ್ಲಿ ಪ್ರತಿ ಶೇ. 1 ರಷ್ಟು ಕೊರತೆಯು ಆಹಾರ ಹಣದುಬ್ಬರವನ್ನು ಸುಮಾರು 25 ಬೇಸಿಸ್ ಪಾಯಿಂಟ್‌ಗಳಷ್ಟು ಹೆಚ್ಚಿಸುತ್ತದೆ.

# ರಾಜ್ಯದಲ್ಲಿ ಕ್ರೀಡಾ ವಿಶ್ವವಿದ್ಯಾನಿಲಯ ಸ್ಥಾಪನೆಗೆ ಚಿಂತನೆ : ಡಿಸಿಎಂ ಪರಮೇಶ್ವರ್

ಉಡುಪಿ: ರಾಜ್ಯದಲ್ಲಿ ಕ್ರೀಡಾ ವಿಶ್ವವಿದ್ಯಾನಿಲಯ ನಿರ್ಮಿಸಲು ಚಿಂತನೆ ನಡೆದಿದ್ದು, ಅದನ್ನು ಉಡುಪಿ ಜಿಲ್ಲೆಯಲ್ಲಿ ಸ್ಥಾಪಿಸುವ ಸಾಧ್ಯತೆಗಳ ಕುರಿತು ಪರಿಶೀಲನೆ ನಡೆಸಲಾಗುತ್ತಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಹೇಳಿದರು.

ಉಡುಪಿ ಜಿಲ್ಲೆಯ ಕಾಪು ತಾಲ್ಲೂಕಿನ ಬೆಳಪು ಗ್ರಾಮದಲ್ಲಿರುವ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ಮತ್ತು ಅತ್ಯಾಧುನಿಕ ಸಂಶೋಧನಾ ಕೇಂದ್ರದ ಕಟ್ಟಡವನ್ನು ಪರಿಶೀಲಿಸಿದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದರು.

ಉಡುಪಿ ಜಿಲ್ಲೆಗೆ ಮೆಡಿಕಲ್ ಕಾಲೇಜು ಇಲ್ಲ. ಅದಕ್ಕೂ ಸಾಧ್ಯತೆ ಇರಬಹುದೇ ಎಂಬುದನ್ನು ಪರಿಶೀಲಿಸಲು ಇಲ್ಲಿಗೆ ಬಂದಿದ್ದೇನೆ. ಈ ಎಲ್ಲಾ ವಿಚಾರಗಳ ಕುರಿತು ಮಾಹಿತಿ ಪಡೆದು ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು.

ಸ್ನಾತಕೋತ್ತರ ಅಧ್ಯಯನ ಕೇಂದ್ರಕ್ಕಾಗಿ ಸುಮಾರು 53.85 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಈ ಬೃಹತ್ ಕಟ್ಟಡವು ಕೆಲ ವರ್ಷಗಳಿಂದ ಬಳಕೆಯಾಗದೆ ಖಾಲಿ ಬಿದ್ದಿದ್ದು, ದುರವಸ್ಥೆಗೆ ತಲುಪುವ ಭೀತಿಯಲ್ಲಿದೆ. ಕಟ್ಟಡ ಹಾಗೂ ಕ್ಯಾಂಪಸ್‌ನ ಸೂಕ್ತ ಮತ್ತು ಸದ್ಬಳಕೆಗೆ ಸರ್ಕಾರದ ಹಂತದಲ್ಲಿ ಚಿಂತನೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

2014–15ನೇ ಸಾಲಿನ ಬಜೆಟ್‌ನಲ್ಲಿ ವಿಜ್ಞಾನ ಕೇಂದ್ರ ಸ್ಥಾಪಿಸುವ ಕುರಿತು ಘೋಷಣೆ ಮಾಡಲಾಗಿತ್ತು. ಕೇಂದ್ರ ಸರ್ಕಾರದ ರೂಸಾ



ಯೋಜನೆಯಡಿ, ಮಂಗಳೂರು ವಿಶ್ವವಿದ್ಯಾನಿಲಯ ಹಾಗೂ ರೂಸಾ ಅನುದಾನದ ಮೂಲಕ ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಉದ್ದೇಶಿಸಲಾಗಿತ್ತು ಎಂದು ಅವರು ತಿಳಿಸಿದರು.

ರಾಜ್ಯದಲ್ಲಿ ಎರಡು ವಿಜ್ಞಾನ ಕೇಂದ್ರಗಳನ್ನು ಸ್ಥಾಪಿಸುವ ಪ್ರಸ್ತಾವನೆ ಇದ್ದು, ಅದರಲ್ಲಿ ಒಂದನ್ನು ಮಂಗಳೂರಿನಲ್ಲಿ ಸ್ಥಾಪಿಸಲು ಆಯ್ಕೆ ಮಾಡಲಾಗಿತ್ತು.

ವಿಜ್ಞಾನ ಕೇಂದ್ರಕ್ಕೆ ಅಗತ್ಯವಿರುವ ಮೂಲಸೌಕರ್ಯಗಳ ಕುರಿತು ನಕ್ಷೆ ತಯಾರಿಸಿ, ಅಗತ್ಯತೆಗಳ ಬಗ್ಗೆ ಚರ್ಚಿಸಿ, ಅನುಮೋದನೆ ಪಡೆದುಕೊಂಡ ಬಳಿಕ ಕಾಮಗಾರಿ ಆರಂಭಿಸಲಾಗಿತ್ತು. ಸುಮಾರು 50ರಿಂದ 60 ಕೋಟಿ ರೂ. ವೆಚ್ಚದಲ್ಲಿ ಅಗತ್ಯ ಮೂಲಸೌಕರ್ಯಗಳನ್ನು ನಿರ್ಮಿಸಲಾಗಿದೆ ಎಂದರು.

ಕಾರಣಾಂತರಗಳಿಂದ ರೂಸಾ ಕಾರ್ಯಕ್ರಮ ಸ್ಥಗಿತಗೊಂಡಿದ್ದು, ಮಂಗಳೂರು ವಿಶ್ವವಿದ್ಯಾನಿಲಯದಿಂದಲೂ ಅನುದಾನ ದೊರೆಯದ ಹಿನ್ನೆಲೆಯಲ್ಲಿ ವಿಜ್ಞಾನ ಕೇಂದ್ರದ ಕಾಮಗಾರಿ ಅರ್ಧಕ್ಕೆ ನಿಂತಿದೆ. ಇದೀಗ ವಿಜ್ಞಾನ ಕೇಂದ್ರಕ್ಕೆ ಚಾಲನೆ ನೀಡುವ ಕುರಿತು ಪ್ರಸ್ತಾಪ ಮಾಡಲಾಗಿದ್ದು,

ಈ ವಿಚಾರ ಉನ್ನತ ಶಿಕ್ಷಣ ಸಚಿವರ ಗಮನಕ್ಕೂ ಬಂದಿದೆ ಎಂದು ತಿಳಿಸಿದರು. ಒಟ್ಟಾರೆ, ಇಲ್ಲಿ ನಿರ್ಮಿಸಿರುವ ಕಟ್ಟಡಗಳು ಹಾಗೂ ಅಭಿವೃದ್ಧಿಪಡಿಸಿರುವ ಕ್ಯಾಂಪಸ್ ಅನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲು ಸರ್ಕಾರದ ಹಂತದಲ್ಲಿ ಅಗತ್ಯ ತೀರ್ಮಾನಗಳನ್ನು ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.

ಕರಾವಳಿ ಭಾಗದಲ್ಲಿ ಹಲವು ಜ್ವಲಂತ ಸಮಸ್ಯೆಗಳಿದ್ದು, ಅವುಗಳಿಗೆ ಪರಿಹಾರ ಕಂಡುಕೊಳ್ಳುವುದು ಸಚಿವ ಸಂಪುಟ ಸಭೆಯ ಪ್ರಮುಖ ಉದ್ದೇಶಗಳಲ್ಲಿ ಒಂದಾಗಿದೆ. ಕರಾವಳಿ ಭಾಗವನ್ನು ಕೇರಳ ಹಾಗೂ ಗೋವಾ ರಾಜ್ಯಗಳು ಪರಿಣಾಮಕಾರಿಯಾಗಿ ಬಳಸಿಕೊಂಡಿವೆ. ಕರ್ನಾಟಕದ ಕರಾವಳಿ ಭಾಗವನ್ನೂ ಇನ್ನಷ್ಟು ಪರಿಣಾಮಕಾರಿಯಾಗಿ ಅಭಿವೃದ್ಧಿಪಡಿಸುವ ಉದ್ದೇಶ ಸರ್ಕಾರಕ್ಕಿದೆ ಎಂದರು.

ಉಡುಪಿಯಲ್ಲಿ ಅಂತಾರಾಷ್ಟ್ರೀಯ ಮಟ್ಟದ ಸರ್ಫಿಂಗ್ ನಡೆಯುತ್ತಿದೆ. ಇಂತಹ ಕಾರ್ಯಕ್ರಮಗಳನ್ನು ಪ್ರೋತ್ಸಾಹಿಸುವ ಮೂಲಕ ಕರಾವಳಿ ಭಾಗದಲ್ಲಿ ಪ್ರವಾಸೋದ್ಯಮವನ್ನು ಇನ್ನಷ್ಟು ಬೆಳೆಸಿದರೆ ಉದ್ಯೋಗ ಸೃಷ್ಟಿಯಾಗುವುದರ ಜೊತೆಗೆ ಆರ್ಥಿಕ ಚಟುವಟಿಕೆಗಳೂ ಹೆಚ್ಚಾಗಲಿವೆ. ಈ ಹಿನ್ನೆಲೆಯಲ್ಲಿ ಟೂರಿಸಂ ಪಾಲಿಸಿಯ ಬಗ್ಗೆಯೂ ಚರ್ಚಿಸಲಾಗುವುದು ಎಂದು ತಿಳಿಸಿದರು.

ದೊಡ್ಡ ದೊಡ್ಡ ಕೈಗಾರಿಕೆಗಳನ್ನು ಈ ಭಾಗಕ್ಕೆ ತರುವುದು ಕಷ್ಟವಾಗಬಹುದು. ಆದರೆ ಸಾಫ್?ಟ ಇಂಡಸ್ಟ್ರಿಗಳನ್ನು ಕರಾವಳಿ ಭಾಗಕ್ಕೆ ತರಲು ಪ್ರಯತ್ನಿಸಲಾಗುವುದು ಎಂದರು. ಈ ಸಂದರ್ಭದಲ್ಲಿ ವಿಧಾನಪರಿಷತ್ ಸದಸ್ಯರಾದ ಮಂಜುನಾಥ್ ಭಂಡಾರಿ, ಕಾಪು ಶಾಸಕ ಗುರ್ಮೆಸುರೇಶ್‌ಶೆಟ್ಟಿ, ಮಾಜಿ ಸಚಿವರಾದ ವಿನಯ್ ಕುಮಾರ್ ಸೊರಕೆ?, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪ್ರಧಾನಕಾರ್ಯದರ್ಶಿ ನವೀನ್‌ರಾಜ್‌ಸಿಂಗ್, ಜಿಲ್ಲಾಧಿಕಾರಿ ಸ್ವರೂಪಾ ಟಿ.ಕೆ. ಮತ್ತಿತರರು ಉಪಸ್ಥಿತರಿದ್ದರು.

ಇ-ಪೇಪರ್: www.munjanevarthe.com

# “14 ವರ್ಷಗಳಿಂದ ಕರಾವಳಿಯಲ್ಲಿ ಹೆಚ್ಚು ಬಿಜೆಪಿ ಶಾಸಕರೇ ಗೆದ್ದಿದ್ದರೂ ಅಭಿವೃದ್ಧಿ ಏಕೆ ಸಾಧ್ಯವಾಗಿಲ್ಲ..?”

ಮಂಗಳೂರು: ಕಳೆದ 14 ವರ್ಷಗಳಿಂದಲೂ ಬಿಜೆಪಿಯ ಹೆಚ್ಚು ಜನ ಶಾಸಕರು ಗೆಲ್ಲುತ್ತಿದ್ದಾರೆ. ಆದರೂ ಕರಾವಳಿಯಲ್ಲಿ ಸಮಗ್ರ ಅಭಿವೃದ್ಧಿ ಏಕೆ ಸಾಧ್ಯವಾಗಿಲ್ಲ ಎಂದು ಅಬಕಾರಿ ಸಚಿವ



ಕೆ.ಎಂ.ಶಿವಲಿಂಗೇಗೌಡ ಪ್ರಶ್ನಿಸಿದ್ದಾರೆ.

ತಮ್ಮ ವಿಡಿಯೋ ಸಂದೇಶದಲ್ಲಿ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅಧ್ಯಕ್ಷತೆಯಲ್ಲಿ ಕರಾವಳಿ ಕರ್ನಾಟಕದ ಮಂಗಳೂರಿನ ಪ್ರಜಾ ಸೌಧದಲ್ಲಿ ಕರ್ನಾಟಕ ಸಚಿವ ಸಂಪುಟ ಸಭೆ ಇದೇ ಮೊದಲ ಬಾರಿಗೆ ನಡೆದಿದೆ. ಇದು ಕೇವಲ ಸ್ಥಳ ಬದಲಾವಣೆಯಲ್ಲ, ಇದು ನಮ್ಮ ಆರ್ಥಿಕ ದಿಕ್ಕನ್ನು ಸೂಚಿಸುವ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದಿದ್ದಾರೆ.

ಕರಾವಳಿ ಮತ್ತು ಮಲೆನಾಡು ಪ್ರದೇಶಗಳ ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಸಮಗ್ರ ಕರಾವಳಿ–ಮಲೆನಾಡು ಪ್ರವಾಸೋದ್ಯಮ ನೀತಿ 2026 ಅನ್ನು ರೂಪಿಸುತ್ತಿದ್ದೇವೆ. ಬಿಜೆಪಿಯು ಮಂಗಳೂರನ್ನು ವಿಭಜಿಸಲು ಅವಕಾಶ ಹುಡುಕುತ್ತಿರುವ ಈ ಸಮಯದಲ್ಲಿ, ನಾವು ಮಂಗಳೂರು ಬೆಳೆಯಲು, ಸಮೃದ್ಧವಾಗಲು ಮತ್ತು ಕರ್ನಾಟಕವನ್ನು ಮುನ್ನಡೆಸುವ ನಗರವನ್ನಾಗಿಸಲು ಅವಕಾಶಗಳನ್ನು ಸೃಷ್ಟಿಸುತ್ತಿದ್ದೇವೆ ಎಂದರು.

ಸಿಟೀಸ್ ಇಂಡೆಕ್ಸ್ 2026ರಲ್ಲಿ ಮಂಗಳೂರು ಅಗ್ರಸ್ಥಾನ ಪಡೆದ ನಗರವಾಗಿ ಹೊರಹೊಮ್ಮಿದೆ. ಮಂಗಳೂರು ಭಾರತದ ಅತ್ಯಂತ ಭರವಸೆಯುಳ್ಳ ನಾನ್–ಮೆಟ್ರೋ ನಗರವಾಗಿದೆ. ನಾವು ಇದನ್ನು ಇನ್ನಷ್ಟು ಉತ್ತಮಪಡಿಸಬೇಕು ಮತ್ತು ಮಂಗಳೂರಿನಲ್ಲಿ ಹೊಸ ಮೆಟ್ರೋ ಸಿಟಿಯನ್ನು ನಿರ್ಮಿಸಬೇಕು ಎಂಬ ಗುರಿಯಿದೆ ಎಂದರು.

ಮಂಗಳೂರಿಗೆ ಅಗ್ರ ಸ್ಥಾನ ಕಲ್ಪಿಸುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಬಿಯಾಂಡ್ ಬೆಂಗಳೂರು ಕನಸಿಗೆ ಈ ಸಂಪುಟ ಸಭೆ ಮುನ್ನುಡಿಯಾಗಿದೆ. ಇಷ್ಟು ದೊಡ್ಡ ರಾಜ್ಯಕ್ಕೆ ಒಂದಕ್ಕಿಂತ ಹೆಚ್ಚು ಎಂಜಿನ್‌ಗಳ (ಅಭಿವೃದ್ಧಿ ಕೇಂದ್ರಗಳ) ಅಗತ್ಯವಿದೆ. ವಾಯು, ರಸ್ತೆ, ರೈಲು ಮತ್ತು ಸಮುದ್ರ ಸಂಪರ್ಕ, ಬಂದರು, ವಿಶ್ವವಿದ್ಯಾನಿಲಯ, ಆರೋಗ್ಯ ಮತ್ತು ಶಿಕ್ಷಣದ ಭದ್ರ ಬುನಾದಿ ಹಾಗೂ ಈಗ ರಾಷ್ಟ್ರೀಯ ಮಟ್ಟದ ಶ್ರೇಯಾಂಕವನ್ನು ಹೊಂದಿರುವ ಮಂಗಳೂರು, ರಾಜ್ಯವನ್ನು ಮುನ್ನಡೆಸುವ ಮತ್ತೊಂದು ಪ್ರಮುಖ ಶಕ್ತಿಯಾಗಬಲ್ಲದು ಎಂಬುದು ಸ್ಪಷ್ಟ ಎಂದರು.

ಕರಾವಳಿ ಪ್ರದೇಶವು ಇಂದು ನಿರೀಕ್ಷೆಯಂತೆ ತನ್ನ ಅರ್ಹತೆಗೆ ತಕ್ಕಂತಹ ಸ್ಥಾನಮಾನವನ್ನು ಪಡೆದಿದೆ. ಇಂದಿನ ಸಚಿವ ಸಂಪುಟ ಸಭೆಯು ಕರಾವಳಿ ಕರ್ನಾಟಕದ ವಿಷಯಗಳ ಕುರಿತು ನಿರ್ಧಾರ ಕೈಗೊಳ್ಳುವ ಉದ್ದೇಶವನ್ನು ಹೊಂದಿದೆ. ಮಂಗಳೂರಿನಂತಹ ನಗರಗಳ ಬೆಳವಣಿಗೆಗೆ ಉತ್ತೇಜನ ನೀಡುವ ಮೂಲಕ ನಾವು ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗೆ ಮನ್ನಣೆ ನೀಡುತ್ತಿದ್ದೇವೆ ಎಂದು ಸಮರ್ಥಿಸಿಕೊಂಡರು.

ಸಮಾಜದಲ್ಲಿ ಮತ್ತು ಜನರ ಮನಸ್ಸಿನಲ್ಲಿ ಗೊಂದಲ ಮೂಡಿಸುವ ಮೂಲಕ ಬಿಜೆಪಿಯು ತನ್ನ ಸಮಯವನ್ನು ವ್ಯರ್ಥ ಮಾಡಲಿ, ಆದರೆ ನಾವು ಮಾತ್ರ ಕರಾವಳಿ ಕರ್ನಾಟಕದ ಜನರ ಅಭಿವೃದ್ಧಿ ಮತ್ತು ಪ್ರಗತಿಯತ್ತ ಗಮನಹರಿಸುತ್ತೇವೆ. ವಿಮಾನ ನಿಲ್ದಾಣ ವಿಸ್ತರಣೆ, ತುಳು ಭಾಷೆಯನ್ನು ಸಂವಿಧಾನದ ಎಂಟನೇ ಪರಿಚ್ಛೇದಕ್ಕೆ ಸೇರ್ಪಡೆಗೊಳಿಸುವುದು ಮತ್ತು ಕರ್ನಾಟಕದ ಮಧ್ಯಭಾಗದೊಂದಿಗೆ ಸಂಪರ್ಕ ಹೆಚ್ಚಿಸಲು ಕೊಂಕಣ ರೈಲ್ವೆಯನ್ನು ಸುಧಾರಿಸುವುದು ಮುಂತಾದ ಬೇಡಿಕೆಗಳ ಬಗ್ಗೆ ಕೇಂದ್ರ ಮಟ್ಟದಲ್ಲಿ ಬಿಜೆಪಿ ಸಂಸದರು ಚರ್ಚಿಸದಿರುವುದು ದುರದೃಷ್ಟಕರ ಎಂದರು.

ಸಂಪುಟ ಸಭೆಗೂ ಮುನ್ನ ಕದ್ರಿ ಮಂಜುನಾಥ ದೇವಸ್ಥಾನಕ್ಕೆ ಭೇಟಿ ನೀಡಿದ ಸಚಿವರು ವಿಶೇಷ ಪೂಜೆ ಸಲ್ಲಿಸಿದರು. ರಾಜ್ಯದಲ್ಲಿ ಉತ್ತಮ ಮಳೆ, ಬೆಳೆಯಾಗಲಿ, ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಿದರು.ಅವರಿಗೆ ಕರಾವಳಿಯು ಜನರನ್ನು ವಿಭಜಿಸುವ ವೇದಿಕೆಯಾದರೆ, ನಮಗೆ ಅದು ಅಭಿವೃದ್ಧಿಯ ಎಂಜಿನ್ ಆಗಿದೆ ಎಂದು ಪ್ರತಿಪಾದಿಸಿದರು.ಸಚಿವ ಸಂಪುಟ ಸಭೆಯ ಹಿಂದೆ ರಾಜಕೀಯ ಉದ್ದೇಶಗಳಿಲ್ಲ ಎಂದು ಸ್ಪಷ್ಟ ಪಡಿಸಿದರು.

# ಪ್ರಧಾನಿ ಮೋದಿ ಅವರ ನೇತೃತ್ವದಲ್ಲಿ ಇವಿ ಕ್ರಾಂತಿ : ಹೆಚ್ಡಿಕೆ

**2047ರ ಹೊತ್ತಿಗೆ ಭಾರತವು ಅಭಿವೃದ್ಧಿ ಹೊಂದಿದ ಭಾರತವಾಗಬೇಕು ಎಂಬುದು ನರೇಂದ್ರ ಮೋದಿಯವರ ಕನಸು. ಈ ದಿಸೆಯಲ್ಲಿ ಜಾಗತಿಕ ಸ್ಪರ್ಧೆಯ ಸವಾಲುಗಳನ್ನು ಎದುರಿಸಲು ನಾವು ಸ್ವಚ್ಛ ಸಾರಿಗೆಗೆ ಉತ್ತೇಜಿನ ನೀಡುವ ಉದ್ದೇಶದಿಂದ ಎಲೆಕ್ಟ್ರಿಕ್ ವಾಹನಗಳ ಕ್ಷೇತ್ರಕ್ಕೆ ಬಲ ತುಂಬುತ್ತಿದ್ದೇವೆ ಎಂದು ಹೇಳಿದರು. ಪಿಎಂ ಡ್ರೈವ್ ಮತ್ತು ಎಲೆಕ್ಟ್ರಿಕ್ ಚಾರ್ಜಿಂಗ್ ಕೇಂದ್ರಗಳ ಮೂಲಸೌಕರ್ಯಗಳನ್ನು ಸೃಷ್ಟಿ ಮಾಡಲು ಈಗಾಗಲೇ 11,900 ಕೋಟಿ ರೂ. ಹಂಚಿಕೆ ಮಾಡಲಾಗಿದೆ. ಎಲೆಕ್ಟ್ರಿಕ್ ಆಂಬ್ಯುಲೆನ್ಸ್‌ಗಳು ಮತ್ತು ಟ್ರಕ್‌ಗಳ ಜತೆಗೆ ಸುಮಾರು 24 ಲಕ್ಷ ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳು, 5 ಲಕ್ಷ ಎಲೆಕ್ಟ್ರಿಕ್ ತ್ರಿಚಕ್ರ ವಾಹನಗಳು ಮತ್ತು 14,000 ಎಲೆಕ್ಟ್ರಿಕ್ ಬಸ್‌ಗಳನ್ನು ಬೆಂಬಲಿಸಲು ಪಿಎಂ ಇ ಡ್ರೈವ್ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ ಎಂದರು.**

ನವದೆಹಲಿ: ಎಲೆಕ್ಟ್ರಿಕ್ ವಾಹನ ಕ್ಷೇತ್ರವು ಸಾಮಾಜಿಕ ಸಬಲೀಕರಣ ಮತ್ತು ಸಾಮಾಜಿಕ ಪರಿವರ್ತನೆಗೆ ಬಹುದೊಡ್ಡ ಕೊಡುಗೆ ನೀಡುತ್ತಿದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅಭಿಪ್ರಾಯಪಟ್ಟರು. ನವದೆಹಲಿಯ ವಿಜ್ಞಾನ ಭವನದಲ್ಲಿ ಬೃಹತ್ ಕೈಗಾರಿಕೆ ಸಚಿವಾಲಯ ವತಿಯಿಂದ ಹಮಿಕೊಂಡಿದ್ದ ಸೇವಾಸಂಕಲ್ಪ ಅಭಿಯಾನ ಕಾರ್ಯಕ್ರಮದಲ್ಲಿ ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಿ ಅವರು ಮಾತನಾಡಿದರು.

ಸ್ವಚ್ಛ ಸಾರಿಗೆ ನರೇಂದ್ರ ಮೋದಿ ಅವರ ಪರಿಕಲ್ಪನೆ. ಸಾಮೂಹಿಕ ಮತ್ತು ಸರಕು ಸಾಗಾಣೆ ಅಷ್ಟೇ ಅಲ್ಲದೆ ಸಾರ್ವಜನಿಕರ ವೈಯಕ್ತಿಕ ಸಾರಿಗೆ ವಿಷಯದಲ್ಲಿಯೂ ಮಾಲಿನ್ಯಮುಕ್ತ ವಾತಾವರಣ ಸೃಷ್ಟಿ ಮಾಡಬೇಕು ಎನ್ನುವುದು ಅವರ ಹೆಗ್ಗುರಿಯಾಗಿದೆ ಎಂದರು.ವಾಣಿಜ್ಯ ಸಾರಿಗೆ ವಲಯದಲ್ಲಿಯೂ ಎಲೆಕ್ಟ್ರಿಕ್ ವಾಹನಗಳಿಂದ ದೊರೆಯುತ್ತಿರುವ ಪ್ರಯೋಜನಗಳು ದೊಡ್ಡ ಪ್ರಮಾಣದಲ್ಲಿವೆ ಎಂದು ಒತ್ತಿ ಹೇಳಿದ ಸಚಿವ ಕುಮಾರಸ್ವಾಮಿ ಅವರು; ಇ-ಬಸ್ಸುಗಳು ಮತ್ತು ಇ-ಟ್ರಕ್‌ಗಳ ಬಳಕೆಯು ಹೆಚ್ಚು ಲಾಭದಾಯಕವಾಗಿದೆ ಮತ್ತು ಈ ಮೂಲಕ ಪರಿಸರಕ್ಕೆ ಪೂರಕವಾದ ವ್ಯವಸ್ಥೆಯು ಸೃಷ್ಟಿಯಾಗಿದೆ. ಇಂತಹ ವಾಹನಗಳ ನಿರ್ವಾಹಕರು ಹೆಚ್ಚುಹೆಚ್ಚು ಲಾಭ ಗಳಿಸುತ್ತಿದ್ದಾರೆ ಎಂದು ಹೇಳಿದರು.

2047ರ ಹೊತ್ತಿಗೆ ಭಾರತವು ಅಭಿವೃದ್ಧಿ ಹೊಂದಿದ ಭಾರತವಾಗಬೇಕು ಎಂಬುದು ನರೇಂದ್ರ ಮೋದಿಯವರ ಕನಸು. ಈ ದಿಸೆಯಲ್ಲಿ ಜಾಗತಿಕ ಸ್ಪರ್ಧೆಯ ಸವಾಲುಗಳನ್ನು ಎದುರಿಸಲು ನಾವು ಸ್ವಚ್ಛ ಸಾರಿಗೆಗೆ ಉತ್ತೇಜಿನ ನೀಡುವ ಉದ್ದೇಶದಿಂದ ಎಲೆಕ್ಟ್ರಿಕ್ ವಾಹನಗಳ ಕ್ಷೇತ್ರಕ್ಕೆ ಬಲ ತುಂಬುತ್ತಿದ್ದೇವೆ ಎಂದು ಹೇಳಿದರು.

ಪಿಎಂ ಡ್ರೈವ್ ಮತ್ತು ಎಲೆಕ್ಟ್ರಿಕ್ ಚಾರ್ಜಿಂಗ್ ಕೇಂದ್ರಗಳ ಮೂಲಸೌಕರ್ಯಗಳನ್ನು ಸೃಷ್ಟಿ ಮಾಡಲು ಈಗಾಗಲೇ 11,900 ಕೋಟಿ ರೂ. ಹಂಚಿಕೆ ಮಾಡಲಾಗಿದೆ. ಎಲೆಕ್ಟ್ರಿಕ್ ಆಂಬ್ಯುಲೆನ್?ಸಗಳು ಮತ್ತು ಟ್ರಕ್‌ಗಳ ಜತೆಗೆ ಸುಮಾರು 24 ಲಕ್ಷ ಎಲೆಕ್ಟ್ರಿಕ್ ದ್ವಿಚಕ್ರ ವಾಹನಗಳು,



5 ಲಕ್ಷ ಎಲೆಕ್ಟ್ರಿಕ್ ತ್ರಿಚಕ್ರ ವಾಹನಗಳು ಮತ್ತು 14,000 ಎಲೆಕ್ಟ್ರಿಕ್ ಬಸ್‌ಗಳನ್ನು ಬೆಂಬಲಿಸಲು ಪಿಎಂ ಇ ಡ್ರೈವ್ ಯೋಜನೆಯನ್ನು ವಿನ್ಯಾಸಗೊಳಿಸಲಾಗಿದೆ ಎಂದರು. ಚಾರ್ಜಿಂಗ್ ಮೂಲಸೌಕರ್ಯವು ಕೇಂದ್ರ ಸರಕಾರದ ಮತ್ತೊಂದು ಪ್ರಮುಖ ಭಾಗವಾಗಿದೆ. ಫೇಮ್–2 ಅಡಿಯಲ್ಲಿ ಇವಿ ಚಾರ್ಜಿಂಗ್ ಮೂಲ ಸೌಕರ್ಯಕ್ಕಾಗಿ 1,000 ಕೋಟಿ ರೂ. ಹಂಚಿಕೆ ಮಾಡಿದ ನಂತರ, ಸಾರ್ವಜನಿಕ ಚಾರ್ಜಿಂಗ್ ಕೇಂದ್ರಗಳಿಗೆ ಪಿಎಂ ಇ ಡ್ರೈವ್ ಅಡಿ 2,000 ಕೋಟಿ ರೂ. ಮೀಸಲಿಡಲಾಗಿದೆ ಎಂದರು. ಜತೆಗೆ, ಸರಕಾರದ ನೀತಿ ಬೆಂಬಲವು ಬೇಡಿಕೆ ಸೃಷ್ಟಿ ಮತ್ತು ದೇಶೀಯ ಉತ್ಪಾದನೆಗೆ ಚಾರ್ಜಿಂಗ್ ಮೂಲಸೌಕರ್ಯವನ್ನು ಮೀರಿ ವಿಸ್ತರಿಸುತ್ತದೆ. 25,938 ಕೋಟಿ ರೂ. ವೆಚ್ಚದಲ್ಲಿ ಆಟೋಮೊಬೈಲ್‌ಗಳಿಗಾಗಿ ಉತ್ಪಾದನೆ ಪ್ರೋತ್ಸಾಹಕ ಯೋಜನೆಯು ಸುಧಾರಿತ ಆಟೋಮೋಟಿವ್ ತಂತ್ರಜ್ಞಾನಗಳ ತಯಾರಿಕೆಯನ್ನು ಉತ್ತೇಜಿಸುವ ಗುರಿ ಹೊಂದಲಾಗಿದೆ ಎಂದು ಮಾಹಿತಿ ನೀಡಿದರು. ಬೃಹತ್ ಕೈಗಾರಿಕೆ ಸಚಿವಾಲಯದ ಕಾರ್ಯದರ್ಶಿ ಕಮ್ರನ್ ರಿಜ್ವಿ, ಹೆಚ್ಚುವರಿ ಕಾರ್ಯದರ್ಶಿ ಹನೀಫ್ ಖುರೇಷಿ ಸೇರಿದಂತೆ ಹಿರಿಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ರಾಜ್ಯದಲ್ಲಿ ಮೋಡ ಬಿತ್ತನೆಗೆ ಎಲ್ಲ ಸಿದ್ಧತೆ ಪೂರ್ಣ; ಸೂಕ್ತ ವಾತಾವರಣಕ್ಕಾಗಿ ಕಾಯುತ್ತಿದ್ದೇವೆ: ಸಿಎಂ ಶಿವಕುಮಾರ್

ಕಲಬುರಗಿ: ರಾಜ್ಯ ಸರ್ಕಾರ ಈಗಾಗಲೇ ಮೋಡ ಬಿತ್ತನೆಗೆ ಅನುಮೋದನೆ ನೀಡಿದ್ದು, ಕೆಲವು ಪ್ರದೇಶಗಳಲ್ಲಿ ಪ್ರಯೋಗಾತ್ಮಕವಾಗಿ ಮೋಡ ಬಿತ್ತನೆ ನಡೆಸಲಾಗಿದೆ. ಮೋಡ ಬಿತ್ತನೆ ಪ್ರಕ್ರಿಯೆಯಲ್ಲಿ ಕೆಲವು ಪ್ರಗತಿ ಕಂಡುಬಂದಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗುರುವಾರ ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೋಡಗಳು ರೂಪುಗೊಂಡಿರುವ ಕುರಿತು ಮಾಹಿತಿ ದೊರೆತ ಕೂಡಲೇ ಈ ಕಾರ್ಯಕ್ಕೆ ನಿಯೋಜಿಸಲಾಗಿರುವ ಸಂಸ್ಥೆ ಸ್ಥಳಕ್ಕೆ ತೆರಳಿ ಮೋಡ ಬಿತ್ತನೆ ನಡೆಸಲಿದೆ ಎಂದು ಹೇಳಿದರು.

ಪ್ರಸ್ತುತ ಬರ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಬೆಳೆ ಸಾಲ ಮನ್ನಾ ಘೋಷಿಸುವ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿ, ಹಿಂದಿನ ವಿಧಾನಮಂಡಲ ಅಧಿವೇಶನದಲ್ಲಿ ಪ್ರತಿಪಕ್ಷ ಬಿಜೆಪಿ ಬರ ಪರಿಸ್ಥಿತಿಯ ಕುರಿತ ಚರ್ಚೆಯಲ್ಲಿ ಭಾಗವಹಿಸದೆ ಅಧಿವೇಶನಕ್ಕೆ ಅಡ್ಡಿಪಡಿಸಲು ಪ್ರಯತ್ನಿಸಿತ್ತು ಎಂದು ಹೇಳಿದರು.

ಇದೀಗ ಸೆಪ್ಟೆಂಬರ್ 21ರಿಂದ 23ರವರೆಗೆ ಮೂರು ದಿನಗಳ ವಿಶೇಷ ವಿಧಾನಮಂಡಲ ಅಧಿವೇಶನ ಕರೆಯಲಾಗಿದ್ದು, ಪಶ್ಚಿಮ ಘಟ್ಟಗಳ ಕುರಿತ ಕಸ್ತೂರಿರಂಗನ್ ಸಮಿತಿ ವರದಿ, ರಾಜ್ಯದ ಬರ ಪರಿಸ್ಥಿತಿ ಹಾಗೂ ಕುಡಿಯುವ ನೀರಿನ ಬಿಕ್ಕಟ್ಟಿನ ಕುರಿತು ವಿಶೇಷವಾಗಿ ಚರ್ಚಿಸಲಾಗುವುದು ಎಂದು ತಿಳಿಸಿದರು.

ಬರ ಪರಿಸ್ಥಿತಿ ಎದುರಿಸಲು ಮತ್ತು ಬೆಳೆ ಸಾಲ ಮನ್ನಾಕ್ಕೆ ನೆರವು ನೀಡುವಂತೆ



ಕೇಂದ್ರ ಸರ್ಕಾರದ ಬಳಿ ನಿಯೋಗ ಕೊಂಡೊಯ್ಯಬೇಕೆಂದು ಬಿಜೆಪಿ ನಾಯಕರು ಸಲಹೆ ನೀಡುತ್ತಾರೆಯೇ ಎಂಬುದನ್ನು ನೋಡೋಣ" ಎಂದು ಹೇಳಿದರು. ಅಕ್ಟೋಬರ್ 15ರಿಂದ ಯುಪಿಐ ವಹಿವಾಟುಗಳಿಗೆ ಹೊಸ ತೆರಿಗೆ ವಿಧಿಸುವ ನೀತಿ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿ, ಸಾಮಾನ್ಯ ಗ್ರಾಹಕರಿಗೆ ಯಾವುದೇ ಶುಲ್ಕ ವಿಧಿಸಲಾಗುವುದಿಲ್ಲ ಎಂದು ಕೇಂದ್ರ ಸರ್ಕಾರ ಹೇಳಿದೆ. ಆದರೆ, ವ್ಯಾಪಾರಿಗಳಿಗೆ ಮಾತ್ರ ಅನ್ವಯವಾಗುವ ಶೇ.0.4ರ ವ್ಯಾಪಾರಿ ರಿಯಾಯಿತಿ ದರವನ್ನು ಪರಿಚಯಿಸಲಾಗಿದೆ. ಇದರಿಂದ ವ್ಯಾಪಾರಿಗಳು ದರ ಹೆಚ್ಚಿಸುವ ಸಾಧ್ಯತೆ ಇದ್ದು, ಅಂತಿಮವಾಗಿ ಅದರ ಹೊರೆ ಗ್ರಾಹಕರ ಮೇಲೆಯೇ ಬೀಳಲಿದೆ ಎಂದು ಹೇಳಿದರು.

ಇದೇ ವೇಳೆ ಗ್ರಾಹಕರ ಜೇಬಿಗೆ ಕನ್ನ ಹಾಕುತ್ತಿರುವ ಕೇಂದ್ರ ಸರ್ಕಾರದ ಕ್ರಮವನ್ನು ನಾನು ತೀವ್ರವಾಗಿ ಖಂಡಿಸುತ್ತೇನೆ" ಎಂದು ಶಿವಕುಮಾರ್ ಹೇಳಿದ್ದು, ಈ ಶುಲ್ಕವನ್ನು ಹಿಂಪಡೆಯುವಂತೆ ಒತ್ತಾಯಿಸಿದರು.

ಬಳಿಕ ಕಾಂಗ್ರೆಸ್ ಸರ್ಕಾರದ ಸಾಧನೆಗಳನ್ನು ಪಟ್ಟಿ ಮಾಡಿದ ಅವರು, ಸ್ವತಂತ್ರ ಭಾರತದ ಭಾಗವಾಗಲು ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನೆರವಾಗುವ ಉದ್ದೇಶದಿಂದ ಅಂದಿನ ಪ್ರಧಾನಿ ಜವಾಹರಲಾಲ್ ನೆಹರೂ ಹಾಗೂ ಗೃಹ ಸಚಿವ ಸರ್ದಾರ್ ವಲ್ಲಭಭಾಯಿ ಪಟೇಲ್ ಸೇನೆಯನ್ನು ಕಳುಹಿಸಿದ್ದರು ಎಂದು ಹೇಳಿದರು.

ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಹಾಗೂ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಕಾಂಗ್ರೆಸ್ ನಾಯಕರ ದೃಢನಿಶ್ಚಯದಿಂದ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸಂವಿಧಾನದ 317ಜೆ ವಿಧಿಗೆ ತಿದ್ದುಪಡಿ ತರಲು ಸಾಧ್ಯವಾಯಿತು. ಇದರ ಅನುಷ್ಠಾನದ ಬಳಿಕ ಸಾವಿರಾರು ವಿದ್ಯಾರ್ಥಿಗಳು ವೈದ್ಯಕೀಯ ಮತ್ತು ಎಂಜಿನಿಯರಿಂಗ್ ಕಾಲೇಜುಗಳಿಗೆ ಪ್ರವೇಶ ಪಡೆಯುತ್ತಿದ್ದು, ಉದ್ಯೋಗಾವಕಾಶಗಳನ್ನೂ ಪಡೆಯುತ್ತಿದ್ದಾರೆ ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಪ್ರದೇಶದ ಜನರು ತಮ್ಮಿಗಾಗಿ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸಿರುವ ಸಂಘಟನೆಗಳು, ವ್ಯಕ್ತಿಗಳು ಮತ್ತು ರಾಜಕೀಯ ಪಕ್ಷಗಳನ್ನು ಮರೆಯುವುದಿಲ್ಲ. ಕೃತಜ್ಞತೆಯ ಸಂಕೇತವಾಗಿ 2023 ಮತ್ತು 2024ರ ಚುನಾವಣೆಗಳಲ್ಲಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಆಯ್ಕೆ ಮಾಡಿದ್ದಾರೆ ಎಂದು ತಿಳಿಸಿದರು.

ಬಳಿಕ 2028ರ ವಿಧಾನಸಭಾ ಚುನಾವಣೆ ಹಾಗೂ 2029ರ ಲೋಕಸಭಾ ಚುನಾವಣೆಯಲ್ಲೂ ಕಾಂಗ್ರೆಸ್‌ಗೆ ಮತ್ತೊಮ್ಮೆ ಬೆಂಬಲ ನೀಡುವಂತೆ ಕಲ್ಯಾಣ ಕರ್ನಾಟಕದ ಮತದಾರರಿಗೆ ಮನವಿ ಮಾಡಿದರು.

# ಮೋದಿಜಿ ಅವರ ಜನ್ಮದಿನದ ಅಂಗವಾಗಿ ಕಡಕೋಳ ಮಹಾಶಕ್ತಿ ಕೇಂದ್ರದಲ್ಲಿ 25 ದೀಪ ಬೆಳಗಿಸಿ ವಿಶೇಷ ಪೂಜೆ

ಮುಂಜಾನೆವಾರ್ತೆ ಮೈಸೂರು : ಪ್ರಧಾನಮಂತ್ರಿ ಮಾನ್ಯ ಶ್ರೀ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ಚಾಮುಂಡೇಶ್ವರಿ ಕ್ಷೇತ್ರ ಗ್ರಾಮಾಂತರ ಮಂಡಲದ ಕಡಕೋಳ ಮಹಾಶಕ್ತಿ ಕೇಂದ್ರದ ವತಿಯಿಂದ ಕಡಕೋಳ ಗ್ರಾಮದ ಕಾಳೀಬೀರಮ್ಮ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿ, ಈಡುಗಾಯಿ ಒಡೆದು ಹಾಗೂ 25 ದೀಪಗಳನ್ನು ಬೆಳಗಿಸುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.




ನಿಕಟಪೂರ್ವ ಅಧ್ಯಕ್ಷರಾದ ಗೆಜ್ಜಗಳ್ಳಿ ಮಹೇಶ್ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರ ದೀರ್ಘಾಯುಷ್ಯ, ಉತ್ತಮ ಆರೋಗ್ಯ ಹಾಗೂ ದೇಶ ಸೇವೆಗೆ ಇನ್ನೂ ಹಲವು ವರ್ಷಗಳ ಶಕ್ತಿ ಮತ್ತು ಅವಕಾಶ ದೊರೆಯಲಿ ಎಂದು ದೇವರಲ್ಲಿ ಪ್ರಾರ್ಥಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಗೆಜ್ಜಗಳ್ಳಿ ಮಹೇಶ್, "ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರಿಗೆ ಆಯಸ್ಸು, ಆರೋಗ್ಯ ಹಾಗೂ ಇನ್ನಷ್ಟು ಶಕ್ತಿ ದೊರೆಯಲಿ. ಅವರ ನೇತೃತ್ವದಲ್ಲಿ ಭಾರತ ದೇಶದ ಸೇವೆ ಮಾಡುವ ಅವಕಾಶ ಇನ್ನೂ ಹತ್ತಾರು ವರ್ಷಗಳ ಕಾಲ ಮುಂದುವರಿಯಲಿ. ವಿಶ್ವದಲ್ಲಿ ಶಾಂತಿ ನೆಲೆಸಲಿ ಹಾಗೂ ಭಾರತವು ವಿಶ್ವಗುರುವಿನ ಸ್ಥಾನವನ್ನು ಮತ್ತಷ್ಟು ಬಲಪಡಿಸಲಿ" ಎಂದು ಆಶಿಸಿದರು.

ಜಾಗತಿಕ ಮಟ್ಟದಲ್ಲಿ ಆರ್ಥಿಕ ಸವಾಲುಗಳ ಪರಿಸ್ಥಿತಿ ಇದ್ದರೂ ಭಾರತ ಆರ್ಥಿಕವಾಗಿ ಮುನ್ನಡೆ ಸಾಧಿಸುತ್ತಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರವು ಸಾಮಾನ್ಯ ಜನರ ಜೀವನಮಟ್ಟದ ಸುಧಾರಣೆ, ಸಾಮಾಜಿಕ ಭದ್ರತೆ, ಮೂಲಸೌಕರ್ಯ ಹಾಗೂ ದೇಶದ ಸಮಗ್ರ ಅಭಿವೃದ್ಧಿಗಾಗಿ ಹಲವು ಜನಪರ ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ ಎಂದು ಅವರು ಹೇಳಿದರು. ದೇಶದ ಅಭಿವೃದ್ಧಿ ಮತ್ತು ಜನಕಲ್ಯಾಣವನ್ನು ಕೇಂದ್ರವಾಗಿಟ್ಟುಕೊಂಡು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಕೈಗೊಂಡಿರುವ ವಿವಿಧ ಯೋಜನೆಗಳು ಹಾಗೂ ಕಾರ್ಯಕ್ರಮಗಳು ದೇಶದ ಪ್ರಗತಿಗೆ ಹೊಸ ವೇಗ ನೀಡಿವೆ ಎಂದು ಮುಖಂಡರು ಅಭಿಪ್ರಾಯ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರದ ಉಪಾಧ್ಯಕ್ಷ ಮಧುಕುಮಾರ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಈರಪ್ಪ, ನಿಕಟಪೂರ್ವ ಪ್ರಧಾನ ಕಾರ್ಯದರ್ಶಿ ಶಿವಕುಮಾರ್, ಕಡಕೋಳ ಮಹಾಶಕ್ತಿ ಕೇಂದ್ರದ ಅಧ್ಯಕ್ಷ ನಾಗೇಶ್, ಪ್ರಧಾನ ಕಾರ್ಯದರ್ಶಿ ಪ್ರದೀಪ್ ಸೇರಿದಂತೆ ರಾಹುಲ್, ರವಿ, ಶಿವಕುಮಾರ್, ಸುರೇಶ್, ಚಂದನ್ ಹಾಗೂ ಮತ್ತಿತರ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

"ದೇಶ ಸೇವೆಯ ಸಂಕಲ್ಪದೊಂದಿಗೆ ಮೋದಿಜಿ ಅವರ ಜನ್ಮದಿನದ ಸಂಭ್ರಮ"

ಕಡಕೋಳ ಮಹಾಶಕ್ತಿ ಕೇಂದ್ರ । ಚಾಮುಂಡೇಶ್ವರಿ ಕ್ಷೇತ್ರ. ಗ್ರಾಮಾಂತರ ಜಿಲ್ಲಾ ಮೈಸೂರು.

ವರದಿ: ಎಂ.ರಾಜ್‌ಕುಮಾರ್

ಇ–ಪೇಪರ್: www.munjanevarthe.com

# ಕನಿಷ್ಠ ವೇತನ ಅಧಿಸೂಚನೆ ಜಾರಿಗೆ ಮೀನಮೇಷ: 3 ಇಲಾಖೆಗಳು ಹೊರಡಿಸಿದ್ದ ಸುತ್ತೋಲೆಗಳಿಗೆ ಹೈಕೋರ್ಟ್ ತಡೆ

ಬೆಂಗಳೂರು: ಕನಿಷ್ಠ ವೇತನದ ಜಾರಿಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಹೊರಡಿಸಿದ್ದ ಅಧಿಸೂಚನೆ ಜಾರಿಗೆ ನಿರಾಕರಿಸಿ ಲೆಕ್ಕ ಪರಿಶೋಧನಾ ಇಲಾಖೆ, ಪೌರಾಡಳಿತ ಇಲಾಖೆ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಹೊರಡಿಸಿದ್ದ ಪ್ರತ್ಯೇಕ 3 ಸುತ್ತೋಲೆಗಳಿಗೆ ಹೈಕೋರ್ಟ್ ಮಧ್ಯಂತರ ತಡೆ ನೀಡಿದೆ.

ಈ ಆದೇಶದಿಂದ ರಾಜ್ಯ ಸರ್ಕಾರ ಹೊರಡಿಸಿದ್ದ ಅಧಿಸೂಚನೆ ಜಾರಿ ಮಾಡಬೇಕಾದ ಅನಿವಾರ್ಯತೆ ಎದುರಾಗಿದೆ. ಕೋರಿ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ ಅಧೀನದ ವಿವಿಧ ಕಾರ್ಮಿಕ ಸಂಘಟನೆಗಳು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಚ್.ಟಿ. ನರೇಂದ್ರ ಪ್ರಸಾದ್ ಅವರ ಪೀಠವು, ಈ ಆದೇಶ ನೀಡಿದೆ. ಅಲ್ಲದೇ, ಪರಿಷ್ಕೃತ ಕನಿಷ್ಠ ವೇತನ ಪಾವತಿಯನ್ನು ಸ್ಥಗಿತಗೊಳಿಸಿದ್ದ ಮೂರು ಸುತ್ತೋಲೆಗಳಿಗೆ ತಡೆಯಾಜ್ಞೆ ನೀಡಿ ಮಧ್ಯಂತರ ಆದೇಶ ನೀಡಿದೆ. ಮುಂದಿನ ವಿಚಾರಣೆಯನ್ನು ಸೆಪ್ಟೆಂಬರ್ 21ಕ್ಕೆ ಮುಂದೂಡಿದೆ.

ಪ್ರಕರಣದ ಹಿನ್ನೆಲೆ: ರಾಜ್ಯ ಸರ್ಕಾರ 2026ರ ಮೇ 22ರಂದು ರಾಜ್ಯದ 83 ನಿಗದಿತ ಉದ್ಯೋಗಗಳಿಗೆ ಕನಿಷ್ಠ ವೇತನ ಪರಿಷ್ಕರಣೆ ಮಾಡಿ ಅಧಿಸೂಚನೆ ಹೊರಡಿಸಿತ್ತು. ಈ ಅಧಿಸೂಚನೆಯನ್ನು ಸರ್ಕಾರದ ಹಲವು ಇಲಾಖೆಗಳು ತಕ್ಷಣವೇ ಜಾರಿಗೆ ತಂದಿದ್ದವು. ಆದರೆ, 2026ರ ಜುಲೈ 15ರಂದು ಹಣಕಾಸು ಇಲಾಖೆ ಅಧಿಕೃತ ಆದೇಶವೊಂದನ್ನು ಹೊರಡಿಸಿ, ಕನಿಷ್ಠ ವೇತನ ಪರಿಷ್ಕರಿಸುವ ಅಧಿಸೂಚನೆಗೆ ತನ್ನ ಆಕ್ಷೇಪವೆತ್ತಿತ್ತು. ಅಲ್ಲದೇ, ಹಣಕಾಸಿನ ಹೊರೆ ಮತ್ತು ಹಣಕಾಸು ಹೂಡಿಕೆಯ ಮೇಲಿನ ಪರಿಣಾಮವನ್ನು ಪರಿಗಣಿಸಿ, ಪರಿಷ್ಕೃತ ಕನಿಷ್ಠ ವೇತನದ ಜಾರಿ ಸ್ಥಗಿತಗೊಳಿಸಲು ಶಿಫಾರಸು ಮಾಡಿತು.

ಇದೇ ಅಂಶವನ್ನು ಪರಿಗಣಿಸಿ ರಾಜ್ಯ ಲೆಕ್ಕಪರಿಶೋಧನೆ ಇಲಾಖೆ, ಪೌರಾಡಳಿತ ನಿರ್ದೇಶನಾಲಯ ಮತ್ತು ಪಂಚಾಯತ್ ರಾಜ್ ಇಲಾಖೆಗಳು ಪ್ರತ್ಯೇಕ ಸುತ್ತೋಲೆಗಳನ್ನು ಹೊರಡಿಸಿ ಸರ್ಕಾರ ಹೊರಡಿಸಿದ್ದ ಕನಿಷ್ಟ ವೇತನ ಪರಿಷ್ಕರಣೆ ಅಧಿಸೂಚನೆಯನ್ನು ಸ್ಥಗಿತಗೊಳಿ ಸುತ್ತೋಲೆಗಳನ್ನು ಹೊರಡಿಸಿದ್ದವು.

ಈ ಮೂರು ಇಲಾಖೆಗಳು ಹೊರಡಿಸಿರುವ ಸುತ್ತೋಲೆಗಳು ಕಾನೂನು ಬಾಹಿರವಾಗಿದ್ದು, ಕಾರ್ಮಿಕರಿಂದ ಪರಿಷ್ಕೃತ ಹೊಸ ಕನಿಷ್ಠ ವೇತನವನ್ನು ಕಸಿದುಕೊಳ್ಳುವ ಉದ್ದೇಶ ಹೊಂದಿವೆ. ಆದ್ದರಿಂದ ತಕ್ಷಣ ಸರ್ಕಾರದ ಅಧಿಸೂಚನೆ ಜಾರಿ ಮಾಡಲು ನಿರ್ದೇಶನ ನೀಡಬೇಕು ಎಂದು ಕೋರಿ ಸೆಂಟರ್ ಆಫ್ ಇಂಡಿಯನ್ ಟ್ರೇಡ್ ಯೂನಿಯನ್ಸ್ (ಸಿಐಟಿಯು) ರಾಜ್ಯ ಸಮಿತಿಯು, ಅದರ ಅಂಗ ಸಂಘಟನೆಗಳಾದ ಕರ್ನಾಟಕ ರಾಜ್ಯ




ಸರ್ಕಾರಿ ಖಾಯಂಮೇತರ ನೌಕರರ ಒಕ್ಕೂಟ, ರಾಜ್ಯ ಮುನ್ಸಿಪಲ್ ಕಾರ್ಮಿಕರ ಸಂಘ, ತುಮಕೂರು ಜಿಲ್ಲಾ ನೀರು ಸರಬರಾಜು ನೌಕರರ ಸಂಘ, ತುಮಕೂರು ನಗರ ಪಾಲಿಕೆ ಕಸದ ಆಟೋ ಚಾಲಕರು ಮತ್ತು ಸಹಾಯಕರ ಸಂಘಗಳು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದವು.

ಅರ್ಜಿದಾರರ ಪರವಾಗಿ ವಾದ ಮಂಡಿಸಿದ್ದ ವಕೀಲ ಎಲ್. ಮುರಳೀಧರ ಪೇಶ್ವಾ, ಮೂರು ಇಲಾಖೆಯ ಸುತ್ತೋಲೆಗಳು ಸಂವಿಧಾನದ ವಿಧಿ 14 (ಸಮಾನತೆ), ವಿಧಿ 21 (ಜೀವಿಸುವ ಹಕ್ಕು) ಮತ್ತು ವಿಧಿ 23 (ಬಲವಂತದ ದುಡಿಮೆ ನಿಷೇಧ) ರ ಅಡಿಯಲ್ಲಿ ನೀಡಲಾಗಿರುವ ಮೂಲಭೂತ ಹಕ್ಕುಗಳನ್ನು ಉಲ್ಲಂಘಿಸಲಿವೆ. ಆದ್ದರಿಂದ ಈ ಸುತ್ತೋಲೆಗಳನ್ನು ಕಾನೂನುಬಾಹಿರ ಎಂದು ಘೋಷಿಸಿ ರದ್ದುಗೊಳಿಸಬೇಕು, ಮತ್ತು ತಕ್ಷಣ ಎಲ್ಲ ಇಲಾಖೆಗಳು ಕನಿಷ್ಠ ವೇದತನ ಜಾರಿಗೆ ಆದೇಶ ನೀಡಬೇಕು ಎಂದು ಕೋರಿದ್ದರು.

# 3 ಕೋಟಿ 25 ಲಕ್ಷ ವೆಚ್ಚದ ಅಭಿವೃದ್ಧಿ ಕಾಮಗಾರಿಗೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಚಾಲನೆ

ಮುಂಜಾನೆವಾರ್ತೆ ಪಾಂಡವಪುರ : ಮೇಲುಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀ ದರ್ಶನ್ ಪುಟ್ಟಣ್ಣಯ್ಯ ಟಿ.ಎಸ್.ಛತ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಸುಮಾರು 3 ಕೋಟಿ 25 ಲಕ್ಷ ವೆಚ್ಚದ ರಸ್ತೆ ಮತ್ತು ಚರಂಡಿ ನಿರ್ಮಾಣ ಕಾಮಗಾರಿಗಳಿಗೆ ಚಾಲನೆ ನೀಡಿದರು. ಈ ಅಭಿವೃದ್ಧಿ ಕಾಮಗಾರಿಗಳು ಗ್ರಾಮೀಣ ಸಂಪರ್ಕ



ರಸ್ತೆಗಳ ಸುಧಾರಣೆಗೆ ಒತ್ತು ನೀಡಲಾಗಿದೆ, ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ಗ್ರಾಮದ ಒಳಗಿನ ರಸ್ತೆ ಹಾಗೂ ಚರಂಡಿ ಕೆಲಸ ನಿರ್ವಹಿಸಲಾಗುತ್ತದೆ ಕೆ.ಹೊಸೂರು ಗ್ರಾಮಕ್ಕೆ 31ಲಕ್ಷ 53ಸಾವಿರ, ಇಂಗಲಗುಪ್ಪೆಗೆ 43ಲಕ್ಷ 25 ಸಾವಿರ, ಕೆರೆತೊಣ್ಣೂರು 48 ಲಕ್ಷ, ತಿರುಮಲಾಪುರ – 49 ಲಕ್ಷ 24 ಸಾವಿರ, ಪಟ್ಟಣಗೆರೆಗೆ 58 ಲಕ್ಷ 43 ಸಾವಿರ, ದೇಶವಳ್ಳಿ 51 ಲಕ್ಷ 22 ಸಾವಿರ ಚಂದ್ರೆ 46 ಲಕ್ಷ ಹಾಗೂ ಹಿರೇಮರಳಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಬನಘಟ್ಟ ಗ್ರಾಮಕ್ಕೆ 17 ಲಕ್ಷ 60 ಸಾವಿರ ಬೇವಿನಕುಪ್ಪೆ ಗ್ರಾಮಕ್ಕೆ 13 ಲಕ್ಷ 80 ಸಾವಿರ ವೆಚ್ಚದಲ್ಲಿ ಉತ್ತಮ ಗುಣಮಟ್ಟದ ರಸ್ತೆಗಳನ್ನು ಮಾಡಲು ಗುತ್ತಿಗೆದಾರರಿಗೆ ಹಾಗೂ ಲೋಕೋಪಯೋಗಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದರು.

ಪ್ರತಿಯೊಂದು ಗ್ರಾಮಕ್ಕೂ ಮೂಲಭೂತ ಸೌಕರ್ಯ ಸಿಗಬೇಕು, ರಸ್ತೆ ಮತ್ತು ಚರಂಡಿ ಇದು ಕೇವಲ ಕಾಮಗಾರಿ ಅಲ್ಲ, ರೈತರ, ಮಕ್ಕಳ, ವೃದ್ಧರ ದಿನನಿತ್ಯದ ಓಡಾಟದ ಸಮಸ್ಯೆಗೆ ಪರಿಹಾರ, ಕಾಮಗಾರಿ ಗುಣಮಟ್ಟದಲ್ಲಿ ರಾಜಿ ಇಲ್ಲ, ನಿಗದಿತ ಸಮಯದಲ್ಲಿ ಮುಗಿಯಬೇಕು, ಗ್ರಾಮಸ್ಥರು ಸಹ ಗುತ್ತಿಗೆದಾರನಿಗೆ ಸಹಕರಿಸಿ ಗುಣಮಟ್ಟದ ರಸ್ತೆಯನ್ನು ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆ ಇಂಜಿನಿಯರ್ ಜಾಯ್ ಕುಮಾರ್, ಪಿಡಿಒ ಕುಮಾರ್, ಮಂಜುನಾಥ, ಮಧುಸೂದನ್, ಗುತ್ತಿಗೆದಾರ ಮಂಜುನಾಥ್, ಮಹಾದೇವ, ಪಾಪೇಗೌಡ, ಸಿದ್ದಲಿಂಗೇಗೌಡ, ಶಿವರಾಂ, ಇಂದ್ರೇಶ್, ದೇವರಾಜು, ದೇಶವಳ್ಳಿ ಅಶೋಕ,ಕೃಷ್ಣೇಗೌಡ, ಅಭಿಷೇಕ್, ಸೇರಿದಂತೆ ರೈತ ಸಂಘದ ಮುಖಂಡರು ಟಿ ಎಸ್ ಕ್ಷೇತ್ರ ಗ್ರಾಮ ಪಂಚಾಯಿತಿ ಹಾಗೂ ಹಿರೇಮರಳಿ ಗ್ರಾಮ ಪಂಚಾಯಿತಿಯ ಮುಖಂಡರು ಸ್ಥಳೀಯರು ಉಪಸ್ಥಿತರಿದ್ದರು.

ಮಳೆ ಇಲ್ಲದ ಕಾರಣ ಪ್ರತಿ ಗ್ರಾಮಗಳಲ್ಲೂ ನೀರಿನ ಸಮಸ್ಯೆ ಇದೆ ಮುಂದಿನ ದಿನಗಳಲ್ಲಿ ಕುಡಿಯುವ ನೀರಿಗೂ ಅಭಾವ ಹೆಚ್ಚಾಗಲಿದ್ದು ಅಂತರ್ಜಲಮಟ್ಟದಲ್ಲೂ ನೀರು ಕಡಿಮೆಯಾಗುತ್ತಿದೆ ಮುಂದಿನ ವಾರ ಅಧಿಕಾರಿಗಳ ತುರ್ತು ಸಭೆ ನಡೆಸಿ ಯಾವುದೇ ರೀತಿ ಕುಡಿಯುವ ನೀರಿಗೆ ತೊಂದರೆ ಆಗದಂತೆ ಅಧಿಕಾರಿಗಳಿಗೆ ಕ್ರಮ ವಹಿಸಲು ಸೂಚನೆ ನೀಡಲಾಗುವುದು, ರೈತರಿಗೆ ನೀರಿಲ್ಲದೆ ಹೋದರೆ ಆದಾಯದ ಮೂಲ ಕೂಡ ಕಡಿಮೆಯಾಗುತ್ತದೆ ದಯಮಾಡಿ ರೈತರು ಕಡಿಮೆ ಖರ್ಚು ಹಾಗೂ ಮಿತ ನೀರನ್ನು ಬಳಸಿ ಎಂದು ಮನವಿ ಮಾಡಿದರು, ಜಿಲ್ಲೆಯಲ್ಲಿ ನಮ್ಮ ಪಾಂಡವಪುರ ತಾಲೂಕನ್ನು ಬರಪೀಡಿತ ಪ್ರದೇಶವಾಗಿ ಘೋಷಣೆ ಮಾಡದೇ ಇರುವುದಕ್ಕೆ ಮುಖ್ಯಮಂತ್ರಿ ರವರ ಜೊತೆ ಚರ್ಚಿಸಲಾಗಿದೆ ಮುಂದಿನ ದಿನಗಳಲ್ಲಿ ಪಾಂಡವಪುರ ತಾಲೂಕನ್ನು ಬರಪೀಡಿತ ತಾಲೂಕು ಎಂದು ಘೋಷಿಸುತ್ತಾರೆ ಎಂಬ ನಂಬಿಕೆ ಇದೆ. ಜಿಲ್ಲೆಯಲ್ಲಿ ಕುಡಿಯಲು ನೀರು ಕೇಳುತ್ತಿದ್ದೇವೆ ಆದರೆ ತಮಿಳುನಾಡು ವ್ಯವಸಾಯಕ್ಕೆ ನೀರು ಕೇಳುತ್ತಿದ್ದಾರೆ ಮುಂದಿನ ದಿನಗಳಲ್ಲಿ ಕಾನೂನು ಹೋರಾಟ ಮಾಡಲೇಬೇಕಾದ ಪರಿಸ್ಥಿತಿ ಇದೆ ಸಚಿವರ ಜೊತೆ ಈ ಬಗ್ಗೆ ಚರ್ಚಿಸಿದ್ದೇನೆ.

ದರ್ಶನ್ ಪುಟ್ಟಣ್ಣಯ್ಯ ಶಾಸಕ ಮೇಲುಕೋಟೆ ವಿಧಾನಸಭಾ ಕ್ಷೇತ್ರ.

ವರದಿ : ಕೃಷ್ಣ ಇ.

# ಭಾರತದ ವಿದ್ಯುತ್ ಚಲನಶೀಲತೆ ಸೂಚ್ಯಂಕದಲ್ಲಿ ಕರ್ನಾಟಕ ಮೂರನೇ ಸ್ಥಾನ: ರಾಜ್ಯದಲ್ಲಿ ಹೇಗಿದೆ ಇವಿ ಪ್ರಗತಿ? ಹೀಗಿವೆ ಪ್ರಮುಖಾಂಶಗಳು!

ಬೆಂಗಳೂರು: ಇವಿ ಪರಿವರ್ತನೆಯಲ್ಲಿ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ಪ್ರಗತಿ ಪತ್ತೆಗಾಗಿ ಭಾರತದ ವಿದ್ಯುತ್ ಚಲನಶೀಲತೆ ಸೂಚ್ಯಂಕವನ್ನು (ಐಇಎಂಐ) ಕೇಂದ್ರ ಸರ್ಕಾರ ಆರಂಭಿಸಿದ್ದು, ಇದರಲ್ಲಿ ರಾಜ್ಯಗಳ ಪ್ರಗತಿ ಕುರಿತು ನೀತಿ ಆಯೋಗ ಮತ್ತು ಡಬ್ಲ್ಯೂಆರ್‌ಐ ಇಂಡಿಯಾ 2025ರ ವರದಿಯನ್ನು ಬಿಡುಗಡೆ ಮಾಡಿದೆ. ಇದರಲ್ಲಿ ಕರ್ನಾಟಕ 73 ಅಂಕಗಳನ್ನು ಪಡೆಯುವ ಮೂಲಕ ಮೂನೇ ಸ್ಥಾನವನ್ನು ಪಡೆದುಕೊಂಡಿದೆ.

ಭಾರತದ ವಿದ್ಯುತ್ ಚಲನಶೀಲತಾ ಸೂಚ್ಯಂಕ ಮೂರು ಪ್ರಮುಖ ವಿಷಯಗಳ ಅಡಿ, 16 ವಿಭಾಗಗಳಲ್ಲಿ 100 ಅಂಕಗಳಲ್ಲಿ ಎಲ್ಲಾ ರಾಜ್ಯ ಮತ್ತು ಕೇಂದ್ರಾಡಳಿತ ಪ್ರದೇಶಗಳ ಪ್ರಗತಿ ಪತ್ತೆ ಮಾಡಿ, ಮೌಲ್ಯಮಾಪನ ಮಾಡಿ ಈ ಅಂಕಗಳನ್ನು ನಿಗದಿ ಮಾಡಲಾಗುತ್ತದೆ.

ಇದರಲ್ಲಿ ಸಾರಿಗೆ ವಿದ್ಯುದೀಕರಣ ಪ್ರಗತಿ, ಸಂಬಂಧಿತ ಚಾರ್ಜಿಂಗ್ ಮೂಲಸೌಕರ್ಯ ಅಭಿವೃದ್ಧಿ, ಚಾರ್ಜಿಂಗ್ ಮೂಲಸೌಕರ್ಯ ಸಿದ್ಧತೆ ಮತ್ತು ಇ.ವಿ.

ಸಂಶೋಧನೆ ಮತ್ತು ನಾವೀನ್ಯತೆ ಸೇರಿದಂತೆ ಇತರ ಅಭಿವೃದ್ಧಿ ಅಂಶಗಳು ಇರುತ್ತವೆ.

ಮೊದಲ ಐದು ಸ್ಥಾನದಲ್ಲಿರುವ ರಾಜ್ಯಗಳು: ನೀತಿ ಆಯೋಗದ ಐಇಎಂಐ 2025ರಲ್ಲಿ ದೆಹಲಿ 84 ಅಂಕಗಳೊಂದಿಗೆ ಮೊದಲ ಸ್ಥಾನದಲ್ಲಿದ್ದರೆ, ಮಹಾರಾಷ್ಟ್ರ 78 ಅಂಕಗಳೊಂದಿಗೆ ಎರಡು ಮತ್ತು ಕರ್ನಾಟಕ ಮೂರನೇ ಸ್ಥಾನದಲ್ಲಿದೆ. ನಂತರದಲ್ಲಿ 71 ಅಂಕಗಳೊಂದಿಗೆ ಚಂಢೀಗಡ, 65 ಅಂಕಗಳೊಂದಿಗೆ ಗೋವಾ ಐದನೇ ಸ್ಥಾನದಲ್ಲಿದೆ.

ಕರ್ನಾಟಕ ಐಇಎಂಐ 2025ರ ಸೂಚ್ಯಂಕದಲ್ಲಿ ಮೂರನೇ ಸ್ಥಾನದಲ್ಲಿದ್ದರೂ ಚಾರ್ಜಿಂಗ್ ಮೂಲಸೌಕರ್ಯ ಸಿದ್ಧತೆಯ ವಿಷಯದಲ್ಲಿ 97 ಅಂಕಗಳನ್ನು ಪಡೆಯುವ ಮೂಲಕ ರಾಷ್ಟ್ರ



ಮಟ್ಟದಲ್ಲಿ ಮುಂಚೂಣಿಯಲ್ಲಿದೆ. ಹಾಗೆಯೇ, ಇವಿ ಸಂಶೋಧನೆ ಮತ್ತು ನಾವೀನ್ಯತೆಯಲ್ಲೂ ಉತ್ತಮ ಸಾಧನೆ ತೋರಿ 82 ಅಂಕಗಳನ್ನು ಗಳಿಸಿದೆ.

2024ರಲ್ಲೂ ದೆಹಲಿ, ಮಹಾರಾಷ್ಟ್ರ, ಕರ್ನಾಟಕ ಮತ್ತು ಚಂಡೀಗಢ ಉತ್ತಮ ಸಾಧನೆ ಮಾಡಿದ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಾಗಿದ್ದವು. ದೊಡ್ಡ ರಾಜ್ಯಗಳಾದ ಮಹಾರಾಷ್ಟ್ರ ಮತ್ತು ಕರ್ನಾಟಕದ ಸಾಧನೆ ತೋರುವುದರ ಜೊತೆಗೆ ಗುಡ್ಡಗಾಡು ಮತ್ತು ಈಶಾನ್ಯ ರಾಜ್ಯವಾಗಿರುವ ಮಣಿಪುರ ಸಹ ಉತ್ತಮ ಸಾಧನೆ ಮಾಡುವ ಮೂಲಕ ಗಮನ ಸೆಳೆದಿದೆ.

ಕರ್ನಾಟಕದ ಸಾಧನೆಯ ಪ್ರಮುಖ ಅಂಶಗಳು: ಕರ್ನಾಟಕ 2017ರ ಸೆಪ್ಟೆಂಬರ್‌ನಲ್ಲಿ ಎಲೆಕ್ಟ್ರಿಕ್ ವಾಹನ ಮತ್ತು ಇಂಧನ ಸಂಗ್ರಹಣಾ ನೀತಿಯನ್ನು ಜಾರಿಗೆ ತರುವ ಮೂಲಕ ರಾಜ್ಯದಲ್ಲಿ ಮೊದಲ ಇವಿ ನೀತಿಯನ್ನು ಅಳವಡಿಸಿಕೊಂಡಿತು.

ಕರ್ನಾಟಕವು 1,91,791 ಚದರ ಕಿಲೋಮೀಟರ್ ವಿಸ್ತೀರ್ಣವನ್ನು ಹೊಂದಿದ್ದು, 2025ರ ಎನ್‌ಸಿಪಿ ಪ್ರಕಾರ ಇದರ ಜನಸಂಖ್ಯೆ 6.87 ಕೋಟಿ ಹಾಗೂ ಎಂಒಎಸ್‌ಪಿಐ ಪ್ರಕಾರ 2024–25ರಲ್ಲಿ ಇದರ ಅಂದಾಜು ಜಿಎಸ್‌ಡಿಪಿ 15.7 ಲಕ್ಷ ಕೋಟಿಯಷ್ಟಿದೆ.

ರಾಜ್ಯದ ಒಟ್ಟಾರೆ ಪ್ರದರ್ಶನ:

ಕರ್ನಾಟಕ ಮೊದಲ ಮೂರನೇ ಸ್ಥಾನದಲ್ಲಿದ್ದು, ಕಳೆದ ಬಾರಿಗೆ ಹೋಲಿಕೆ ಮಾಡಿದಾಗ ಇದು ಚಂಢೀಗಢವನ್ನು ಹಿಂದಿಕ್ಕಿದೆ.

ಸಾರಿಗೆ ವಿದ್ಯುದ್ದೀಕರಣದಲ್ಲಿ ಸುಧಾರಣೆ ಕಂಡಿದೆಯಾದರೂ ಅಳವಡಿಕೆಯಲ್ಲಿ ಅಂತರ ಉಳಿದಿದೆ.

ಚಾರ್ಜಿಂಗ್ ಸೌಲಭ್ಯದಲ್ಲಿ 97 ಅಂಕಕ್ಕೆ ಜಿಗಿತಗೊಂಡಿದೆ.

ಸಂಶೋಧನೆ ಮತ್ತು ನಾವೀನ್ಯತೆಯಲ್ಲಿ 82 ಅಂಕಕ್ಕೆ ಏರಿಕೆ ಕಂಡಿದ್ದು, ಇದು ನವೋದ್ಯಮ ಮತ್ತು ಸಂಶೋಧನೆ ಮತ್ತು ಅಭಿವೃದ್ಧಿ ಬೆಳವಣಿಗೆಯನ್ನು ಪ್ರತಿಬಿಂಬಿಸುತ್ತದೆ.

ರಾಜ್ಯದ ಕಾರ್ಯಕ್ಷಮತೆ

ಚಾರ್ಜಿಂಗ್ ಮೂಲಸೌಕರ್ಯದಲ್ಲಿ ರಾಜ್ಯ ಅತ್ಯುತ್ತಮ ಸಾಧನೆ ಮಾಡಿದ್ದು, ಚಾರ್ಜರ್ – ಟು – ವಾಹನ ಅನುಪಾತ ಮತ್ತು ನವೀಕರಿಸಬಹುದಾದ ಇಂಧನ ಏಕೀಕರಣದೊಂದಿಗೆ ರಾಷ್ಟ್ರೀಯವಾಗಿ ಮುಂಚೂಣಿಯಲ್ಲಿದೆ.

ಬೆಂಗಳೂರಿನ ಪರಿಸರ ವ್ಯವಸ್ಥೆಯು ಇವಿ ಸ್ಟಾರ್ಟ್‌ಅಪ್‌ಗಳು, ಸಂಶೋಧನೆ ಮತ್ತು ಅಭಿವೃದ್ಧಿ ಮತ್ತು ಐಪಿ ಸೃಷ್ಟಿಗೆ ಚಾಲನೆ ನೀಡುತ್ತದೆ.

ಮೂಲಸೌಕರ್ಯ ಬಲದ ಹೊರತಾಗಿಯೂ, ನಿಜವಾದ ಇವಿ ಫ್ಲೀಟ್ ವಿದ್ಯುದೀಕರಣದಲ್ಲಿ ದೆಹಲಿ ಮತ್ತು ಮಹಾರಾಷ್ಟ್ರಕ್ಕೆ ಹೋಲಿಸಿದರೆ ಹಿಂದುಳಿದಿದೆ.

ಪ್ರಮುಖ ವೈಶಿಷ್ಟ್ಯಗಳು

'ಬೆಸ್ಕಾಂ ಇವಿ ಮಿತ್ರ' ಎಂಬ ಏಕೀಕೃತ ಇವಿ ಚಾರ್ಜಿಂಗ್ ಆಯಪ್‌ನ ಪರಿಚಯದೊಂದಿಗೆ, ಸಿಂಗಲ್ ವಿಂಡೋ ಅನುಮೋದನೆ ವ್ಯವಸ್ಥೆ ಮತ್ತು 'ಇವಿ ಆಕ್ಸಿಲರೇಟರ್ ಸೆಲ್' ಅನ್ನು ಜಾರಿಗೆ ತರಲಾಗಿದೆ.

ಮುಂಜಾನೆ ವಾರ್ತೆ
ಕನ್ನಡ ದಿನಪತ್ರಿಕೆ
ಇ-ಪೇಪರ್: www.munjanevarth.com
ಶನಿವಾರ 19 ಸೆಪ್ಟೆಂಬರ್ 2026
SATURDAY 19 SEPTEMBER 2026

# ನರ್ಸ್ ಮೇಲಿನ ದಾಳಿ ತಡೆಯಲು ಧೈರ್ಯದಿಂದ ಮಧ್ಯಪ್ರವೇಶಿಸಿದ ಟ್ರಾಫಿಕ್ ಸಬ್‌ಇನ್ಸ್‌ಪೆಕ್ಟರವರಿಗೆ ಅಭಿನಂದನೆ

ಮುಂಜಾನೆವಾರ್ತೆ ಬೆಂಗಳೂರು: ಜೆ.ಪಿ.ನಗರ 3ನೇ ಹಂತದ ಖಾಸಗಿ ಕ್ಲಿನಿಕ್‌ವೊಂದರ ಬಳಿ ಗುರುವಾರ ಬೆಳಗ್ಗೆ 26 ವರ್ಷದ ನರ್ಸ್‌ವೊಬ್ಬರನ್ನು ಅವರ ಪತಿ ಎನ್ನಲಾದ ವ್ಯಕ್ತಿ ಮಚ್ಚು ಹಾಗೂ ಆ್ಯಸಿಡ್‌ನಿಂದ ಹಿಂಬಾಲಿಸಿ ದಾಳಿ ಮಾಡಿದ ಘಟನೆ ಆತಂಕಕ್ಕೆ ಕಾರಣವಾಗಿತ್ತು. ಈ ವೇಳೆ ಸಮೀಪದಲ್ಲೇ ಕರ್ತವ್ಯದಲ್ಲಿದ್ದ ಜೆ.ಪಿ.ನಗರ ಸಂಚಾರ ಪೊಲೀಸ್ ಠಾಣೆಯ ಟ್ರಾಫಿಕ್ ಸಬ್‌ಇನ್ಸ್‌ಪೆಕ್ಟರ್ ಶ್ರೀ ವೆಂಕಟೇಶ್ ಕೆ. ಅವರು ಜನರ ಕೂಗಾಟ ಕೇಳಿ ತಕ್ಷಣ ಸ್ಥಳಕ್ಕೆ ಧಾವಿಸಿದರು. ಪರಾರಿಯಾಗಲು ಯತ್ನಿಸುತ್ತಿದ್ದ ವೆಂಕಟೇಶನ್ನನ್ನು ಬೇಸ್‌ಮೆಂಟ್‌ನಲ್ಲಿ ತಡೆಯಲು ಮುಂದಾಗಿ, ಸಮಯಪ್ರಜ್ಞೆ ಮತ್ತು ಧೈರ್ಯದಿಂದ



ಕರ್ತವ್ಯ ನಿರ್ವಹಿಸಿದರು. ತಮ್ಮ ಜೀವದ ಹಂಗನ್ನೂ ಲೆಕ್ಕಿಸದೆ ಸಾರ್ವಜನಿಕರ ಸುರಕ್ಷತೆಗಾಗಿ ತಕ್ಷಣ ಕಾರ್ಯಪ್ರವೃತ್ತರಾದ ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ವೆಂಕಟೇಶ್ ಕೆ. ಅವರ ಕರ್ತವ್ಯನಿಷ್ಠೆ ಮತ್ತು ಧೈರ್ಯವನ್ನು ಗೌರವಿಸಿ ಸನ್ಮಾನಿಸಲಾಯಿತು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಒಇಖ ಅಧ್ಯಕ್ಷರಾದ ಶ್ರೀ ಎಸ್. ಮನೋಹರ್ ಮತ್ತು ಅವರ ತಂಡದ ವತಿಯಿಂದ ಈ ಸನ್ಮಾನ ನೆರವೇರಿಸಲಾಯಿತು.

"ಸಂಕಷ್ಟದ ಸಂದರ್ಭದಲ್ಲಿ ಸಮಯಪ್ರಜ್ಞೆಯಿಂದ ಕಾರ್ಯನಿರ್ವಹಿಸುವ ಪೊಲೀಸ್ ಸಿಬ್ಬಂದಿಯ ಸೇವೆ ಸಮಾಜಕ್ಕೆ ಮಾದರಿ."

ಇ-ಪೇಪರ್: www.munjanevarthe.com



ಪ್ರಧಾನಿ ನರೇಂದ್ರಮೋದಿರವರ 76ನೇ ಹುಟ್ಟುಹಬ್ಬದ ಪ್ರಯುಕ್ತ ಅಂತರಶಾಲಾ ಮೋದಿ ಕಪ್-2026 ವಾಲಿಬಾಲ್ ಪಂದ್ಯಾವಳಿಯಲ್ಲಿ ಎನ್.ಪಿ.ಎಸ್.ಜಾಲಹಳ್ಳಿ ಬಾಲಕಿಯರ ತಂಡ ವಿಜೇತರಾದರು. ಶಾಸಕರಾದ ಎಸ್.ಸುರೇಶ್ ಕುಮಾರ್ ಮತ್ತು ಕೇಂದ್ರ ಜಿಲ್ಲಾ ಬಿಜೆಪಿ ಸಪ್ತಗಿರಿಗೌಡರು, ಬಿಬಿಎಂಪಿ ಮಾಜಿ ಸದಸ್ಯ ಎಂ.ಮುನಿರಾಜುರವರು ಬಹುಮಾನ ವಿತರಿಸಿದರು. ಮಂಡಲ ಅಧ್ಯಕ್ಷ ಸುದರ್ಶನ್, ಗಿರೀಶ್ ಗೌಡ, ಮಧುಸೂದನ್ ಬಾಬು, ಕಾಮಧೇನು ಸುರೇಶ್, ಎಂ.ಎಸ್.ಸಂಜಯ್ ಕುಮಾರ್ ಉಪಸ್ಥಿತರಿದ್ದರು.

# ಕೆ.ಆರ್.ಪೇಟೆ ಬಿಜಿಎಸ್ ಎಜುಕೇಷನ್ ಸೆಂಟರ್‌ನಲ್ಲಿ ಭಾವಪೂರ್ಣ 'ತಂದೆ-ತಾಯಂದಿರ ಪಾದಪೂಜೆ' ಕಾರ್ಯಕ್ರಮ

ಮುಂಜಾನೆವಾರ್ತೆ ಕೆ.ಆರ್.ಪೇಟೆ: ಸ್ಥಳೀಯ ಬಿಜಿಎಸ್ ಎಜುಕೇಷನ್ ಸೆಂಟರ್‌ನಲ್ಲಿ ಪರಮಪೂಜ್ಯ ಜಗದ್ಗುರು, ಪದ್ಮಭೂಷಣ, ಯುಗಯೋಗಿ, ಭೈರವೈಕ್ಯ





ಶ್ರೀ ಡಾ. ಬಾಲಗಂಗಾಧರನಾಥ ಮಹಾಸ್ವಾಮೀಜಿಗಳವರ 54ನೇ ವಾರ್ಷಿಕ ಪಟ್ಟಾಭಿಷೇಕ ಮಹೋತ್ಸವದ ಸವಿನೆನಪಿಗಾಗಿ ವಿಶೇಷ ಕಾರ್ಯಕ್ರಮವೊಂದನ್ನು ಆಯೋಜಿಸಲಾಗಿತ್ತು.

ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಪರಮಪೂಜ್ಯ ಜಗದ್ಗುರು ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಗಳವರ ದಿವ್ಯ ಕೃಪಾಶೀರ್ವಾದಗಳೊಂದಿಗೆ, ಹೇಮಗಿರಿ ಬಿಜಿಎಸ್ ಶಾಖಾಮಠದ ಪ್ರಧಾನ ಕಾರ್ಯದರ್ಶಿಗಳಾದ ಡಾ. ಜೆ.ಎನ್. ರಾಮಕೃಷ್ಣೇಗೌಡರ ನೇತೃತ್ವದಲ್ಲಿ ಎಸ್.ಎಸ್.ಎಲ್.ಸಿ (SSLC) ವಿದ್ಯಾರ್ಥಿಗಳಿಂದ ತಮ್ಮ ತಂದೆ-ತಾಯಂದಿರಿಗೆ 'ಪಾದಪೂಜೆ' ನೆರವೇರಿಸುವ ಭಾವಪೂರ್ಣ ಕಾರ್ಯಕ್ರಮ ಅತ್ಯಂತ ಶ್ರದ್ಧಾ-ಭಕ್ತಿಗಳಿಂದ ಜರುಗಿತು.

ಕಾರ್ಯಕ್ರಮದ ನೇತೃತ್ವ ವಹಿಸಿ ಮಾತನಾಡಿದ ಡಾ. ಜೆ.ಎನ್. ರಾಮಕೃಷ್ಣೇಗೌಡರು, "ವಿದ್ಯಾರ್ಥಿಗಳಲ್ಲಿ ಕೇವಲ ಅಂಕ ಗಳಿಕೆಯಷ್ಟೇ ಮುಖ್ಯವಲ್ಲ; ಸಂಸ್ಕಾರ, ಗೌರವ ಮತ್ತು ತಂದೆ-ತಾಯಂದಿರ ಬಗ್ಗೆ ಪೂಜ್ಯಭಾವನೆ ಬೆಳೆಯುವುದು ಅಷ್ಟೇ ಅಗತ್ಯ. ಭೈರವೈಕ್ಯ ಶ್ರೀ ಡಾ. ಬಾಲಗಂಗಾಧರನಾಥ ಮಹಾಸ್ವಾಮೀಜಿಗಳು ಸಮಾಜಕ್ಕೆ ನೀಡಿದ ಶಿಕ್ಷಣ ಮತ್ತು ಸಂಸ್ಕಾರದ ಸಂದೇಶವನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಈ ಕಾರ್ಯಕ್ರಮದ ಮುಖ್ಯ ಉದ್ದೇಶ" ಎಂದು ತಿಳಿಸಿದರು.

ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಸಿದ್ಧರಾಗುತ್ತಿರುವ ವಿದ್ಯಾರ್ಥಿಗಳು ತಮ್ಮ ಪೋಷಕರ ಪಾದಗಳಿಗೆ ಪೂಜೆ ಸಲ್ಲಿಸಿ, ಅವರ ಆಶೀರ್ವಾದ ಪಡೆದರು. ಮಕ್ಕಳ ಈ ಭಕ್ತಿಪೂರ್ವಕ ಸೇವೆ ಹಾಗೂ ಗೌರವವನ್ನು ಕಂಡು ಪೋಷಕರು ಅತ್ಯಂತ ಭಾವುಕರಾದರು.

ಈ ಸಂದರ್ಭದಲ್ಲಿ ಹರಟೆ ಖ್ಯಾತಿಯ ನಾಗಶ್ರೀ ತ್ಯಾಗರಾಜ್. ಸಮಾಜ ಸೇವಕರಾದ ಆರ್.ಟಿ.ಓ ಮಲ್ಲಿಕಾರ್ಜುನ್.ಗಂಜೀಗೆರೆ ಮಹೇಶ್ .ಪ್ರಾಂಶುಪಾಲರಾದ ಮಹದೇವ್.ಪ್ರಸಾದೇ ಗೌಡ. ರಾಮಚಂದ್ರು.ಸುನೀಲ್ ಕುಮಾರ್.ಶೃತಿ. ದಾಕ್ಷಾಯಿಣಿ. ಚಿದಂಬರ್.ಅರುಣಾ. ಪುರೋಹಿತರಾದ ರಾಘವೇಂದ್ರ. ಪತ್ರಕರ್ತರಾದ ಹೆಚ್.ಬಿ.ಮಂಜುನಾಥ್.ಶಾರಳ್ಳಿ ಗೋವಿಂದರಾಜು.ಸೈಯದ್ ಖಲೀಲ್. ಲೋಕೇಶ್.ವಿ ಸೇರಿದಂತೆ ಶಿಕ್ಷಕ ವೃಂದ, ಸಿಬ್ಬಂದಿ, ನೂರಾರು ವಿದ್ಯಾರ್ಥಿಗಳು ಹಾಗೂ ಅವರ ಪೋಷಕರು ಉಪಸ್ಥಿತರಿದ್ದರು.

ವರದಿ: ಲೋಕೇಶ್.ವಿ

# ಕಾಮಗಾರಿ ಸ್ಥಳದಲ್ಲಿ ರೋಜ್ಗಾರ್ ದಿನಾಚರಣೆ: ಕೂಲಿಕಾರ್ಮಿಕರಿಗೆ ಯೋಜನೆ ಕುರಿತು ಮಾಹಿತಿ

ಮುಂಜಾನೆವಾರ್ತೆ ಔರಾದ್: ತಾಲೂಕಿನ ಸುಂಧಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಖಾಸೆಂಪೂರ ಗ್ರಾಮದಲ್ಲಿ ಶುಕ್ರವಾರ ವಿಬಿ-ಜಿ ರಾಮ್ ಜಿ ಯೋಜನೆಯಡಿ ನಡೆಯುತ್ತಿರುವ ರಸ್ತೆ ನಿರ್ಮಾಣ ಹಾಗೂ ಸಸಿ ನೆಡುವಿಕೆ ಕಾಮಗಾರಿ ಸ್ಥಳದಲ್ಲಿಯೇ ಕೂಲಿಕಾರ್ಮಿಕರೊಂದಿಗೆ ರೋಜ್ಗಾರ್ ದಿನಾಚರಣೆ ಆಚರಿಸಲಾಯಿತು.

ಬಳಿಕ ತಾಲೂಕು ಪಂಚಾಯತ್ ಸಹಾಯಕ ನಿರ್ದೇಶಕ (ಗ್ರಾ.ಉ) ಶಿವಕುಮಾರ ಘಾಟೆ ಅವರು ಕೂಲಿಕಾರ್ಮಿಕರೊಂದಿಗೆ ಸಂವಾದ ನಡೆಸಿ, ವಿಬಿ-ಜಿ ರಾಮ್ ಜಿ ಯೋಜನೆಯ ಉದ್ದೇಶ, ಅನುಷ್ಠಾನ



ಹಾಗೂ ಗ್ರಾಮೀಣ ಕುಟುಂಬಗಳಿಗೆ ಯೋಜನೆಯಡಿ ದೊರೆಯುವ ಉದ್ಯೋಗಾವಕಾಶಗಳ ಕುರಿತು ಮಾಹಿತಿ ನೀಡಿದರು.

ಗ್ರಾಮೀಣ ಪ್ರದೇಶದ ಅರ್ಹ ಕುಟುಂಬಗಳಿಗೆ ಸ್ಥಳೀಯವಾಗಿಯೇ ಉದ್ಯೋಗಾವಕಾಶ ಕಲ್ಪಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಕೂಲಿಕಾರ್ಮಿಕರು ತಮ್ಮ ಜಾಬ್ ಕಾರ್ಡ್‌ಗಳನ್ನು ಸಕ್ರಿಯವಾಗಿ ಬಳಸಿಕೊಂಡು ಗ್ರಾಮ ಪಂಚಾಯಿತಿಗೆ ಕೆಲಸಕ್ಕಾಗಿ ಬೇಡಿಕೆ ಸಲ್ಲಿಸಬೇಕು ಎಂದು ತಿಳಿಸಿದರು. ಯೋಜನೆಯಡಿ ಲಭ್ಯವಿರುವ ವಿವಿಧ ವೈಯಕ್ತಿಕ ಹಾಗೂ ಸಮುದಾಯ ಆಧಾರಿತ ಕಾಮಗಾರಿಗಳ ಸದುಪಯೋಗ ಪಡೆದುಕೊಳ್ಳುವಂತೆ ಮಾಹಿತು ನೀಡಿದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀಪತರಾವ ಚಿಟಗೀರೆ ಮಾತನಾಡಿ, ವೈಯಕ್ತಿಕ ಹಾಗೂ ಸಮುದಾಯ ಆಧಾರಿತ ಕಾಮಗಾರಿಗಳ ಮೂಲಕ ಗ್ರಾಮಗಳ ಅಭಿವೃದ್ಧಿಗೆ ಉತ್ತೇಜನ ನೀಡುವುದರ ಜೊತೆಗೆ, ಗ್ರಾಮೀಣ ಕುಟುಂಬಗಳಿಗೆ ಸ್ಥಳೀಯವಾಗಿಯೇ ಉದ್ಯೋಗ ಒದಗಿಸಲಾಗುತ್ತಿದೆ ಎಂದರು.

ಇದೇ ವೇಳೆ ತಾಲೂಕು ಪಂಚಾಯತ್ ತಾಂತ್ರಿಕ ಸಂಯೋಜಕ ಆನಂದ ಕಾಳಗಾಪೂರೆ, ತಾಂತ್ರಿಕ ಸಹಾಯಕ ಸಂದೀಪ, ಐಇಸಿ ಸಂಯೋಜಕ ಅಂಬಾದಾಸ ಪಾಟೀಲ್, ಕಲಾವತಿ, ರುಕ್ಮಿಣಿ, ಜಗದೀಶ್ ಪಾಟೀಲ್, ವೆಂಕಟ್ ಪಾಟೀಲ್ ಖಾಸೆಂಪೂರ್, ಬಂಡೆಪ್ಪ, ಸಂಜು ರೊಂಡೆ, ವಿಜಯಕುಮಾರ ಮೇತ್ರೆ, ಪ್ರಭು ಪಾಟೀಲ್, ಮಹೇಶ್, ಇರ್ಷದ್ ಸೇರಿದಂತೆ ಕೂಲಿಕಾರ್ಮಿಕರು ಉಪಸ್ಥಿತರಿದ್ದರು...

ವರದಿ: ಕಿರಣ ಚಿಂತಾಕಿ

# ಮೈಸೂರು ದಸರಾ ಉದ್ಘಾಟನೆಗೆ ನ್ಯಾಯಮೂರ್ತಿ ಬಿ.ವಿ.ನಾಗರತ್ನ ಹೆಸರು ಪರಿಗಣಿಸಲು ಒತ್ತಾಯ

ಮುಂಜಾನೆವಾರ್ತೆ ಮಂಡ್ಯ:- ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಉದ್ಘಾಟನೆಗೆ ಮಂಡ್ಯದ ಮಣ್ಣಿನ ಮಗಳು ಹಾಗೂ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿ ಬಿ.ವಿ. ನಾಗರತ್ನ ಅವರ ಹೆಸರನ್ನು ಪರಿಗಣಿಸುವಂತೆ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರು ಹಾಗೂ ವಿಧಾನ ಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ ಅವರು ಸರ್ಕಾರಕ್ಕೆ ಪತ್ರ ಬರೆದು ಒತ್ತಾಯಿಸಿದ್ದಾರೆ.

ಕರ್ನಾಟಕದ ಕಲೆ, ಸಂಸ್ಕೃತಿ, ಪರಂಪರೆ ಮತ್ತು ವೈಭವವನ್ನು ಜಗತ್ತಿಗೆ ಪರಿಚಯಿಸುವ ನಾಡಹಬ್ಬದ ಉದ್ಘಾಟನೆಗೆ ರಾಜ್ಯದೊಂದಿಗೆ ನಿಕಟ ನಂಟು ಹೊಂದಿರುವ ಗಣ್ಯರನ್ನು ಆಹ್ವಾನಿಸುವುದು ಸೂಕ್ತವಾಗಿದ್ದು, ಈ ಹಿನ್ನೆಲೆಯಲ್ಲಿ ನ್ಯಾಯಮೂರ್ತಿ ಬಿ.ವಿ. ನಾಗರತ್ನ ಅವರನ್ನು ಆಯ್ಕೆ ಮಾಡಬೇಕು ಎಂದು ಅವರು ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಮಂಡ್ಯ ಜಿಲ್ಲೆಯ ಪಾಂಡವಪುರ ತಾಲ್ಲೂಕಿನ ಇಂಗಲಗುಪ್ಪೆ ಗ್ರಾಮದವರಾದ ಬಿ.ವಿ. ನಾಗರತ್ನ ಅವರು, ಸುಪ್ರೀಂ ಕೋರ್ಟ್‌ನ ಮಾಜಿ ಮುಖ್ಯ ನ್ಯಾಯಮೂರ್ತಿ ದಿವಂಗತ ಇ.ಎಸ್. ವೆಂಕಟರಾಮಯ್ಯ ಅವರ ಪುತ್ರಿ. 2027ರ ಸೆಪ್ಟೆಂಬರ್ 25ರಂದು ಭಾರತದ ಪ್ರಥಮ ಮಹಿಳಾ ಮುಖ್ಯ ನ್ಯಾಯಮೂರ್ತಿಯಾಗಿ ಅಧಿಕಾರ ಸ್ವೀಕರಿಸಲಿರುವ ಅವರು, ದೇಶದ ನ್ಯಾಯಾಂಗ ಇತಿಹಾಸದಲ್ಲಿ ಮಹತ್ವದ ಮೈಲಿಗಲ್ಲು ಸ್ಥಾಪಿಸಲಿದ್ದಾರೆ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಕರ್ನಾಟಕ ಹೈಕೋರ್ಟ್ ನ್ಯಾಯಮೂರ್ತಿಯಾಗಿ ಹಾಗೂ ಪ್ರಸ್ತುತ ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಿರುವ ನಾಗರತ್ನ ಅವರು ಕರ್ನಾಟಕ ನ್ಯಾಯಾಂಗ ಅಕಾಡೆಮಿ ಹಾಗೂ ಬೆಂಗಳೂರು ಮಧ್ಯಸ್ಥಿಕೆ ಕೇಂದ್ರದ ಅಧ್ಯಕ್ಷರಾಗಿ ಸೇರಿದಂತೆ ಹಲವು ಪ್ರಮುಖ ಜವಾಬ್ದಾರಿಗಳನ್ನು ನಿರ್ವಹಿಸಿದ್ದಾರೆ.



ಮಹಿಳಾ ಸಬಲೀಕರಣಕ್ಕೆ ಪ್ರೇರಣೆಯಾಗಿರುವ ನ್ಯಾಯಮೂರ್ತಿ ನಾಗರತ್ನ ಅವರನ್ನು ಮೈಸೂರು ದಸರಾ ಉದ್ಘಾಟಕರನ್ನಾಗಿ ಆಹ್ವಾನಿಸುವುದರಿಂದ ನಾಡಹಬ್ಬದ ಗೌರವ ಮತ್ತಷ್ಟು ಹೆಚ್ಚಲಿದೆ. ಆದ್ದರಿಂದ ಅವರ ಸಾಧನೆ ಮತ್ತು ಸೇವೆಯನ್ನು ಗೌರವಿಸಿ ಈ ಬಾರಿಯ ದಸರಾ ಮಹೋತ್ಸವದ ಉದ್ಘಾಟಕರನ್ನಾಗಿ ಆಯ್ಕೆ ಮಾಡುವಂತೆ ದಿನೇಶ್ ಗೂಳಿಗೌಡ ಅವರು ಸರ್ಕಾರವನ್ನು ಒತ್ತಾಯಿಸಿದ್ದಾರೆ.

ವರದಿ: ಜನಾರ್ಧನ ಹೂತಗೆರೆ

# ಗೃಹಜ್ಯೋತಿ ನೋಂದಣಿಗೆ ಸೆ.30 ಕೊನೇ ದಿನ

ಮುಂಜಾನೆವಾರ್ತೆ ಅರಸೀಕೆರೆ : ವಿದ್ಯುತ್ ಸರಬರಾಜು ನಿಗಮ ನಿಯಮಿತ (ಎಸ್ಕಾಂ) ವತಿಯಿಂದ ಕೈಗೊಳ್ಳಲಾಗುತ್ತಿರುವ ಗೃಹಜ್ಯೋತಿ ಯೋಜನೆಯ ಮರು ಪರಿಶೀಲನೆ ಹಾಗೂ ನೋಂದಣಿ ಪ್ರಕ್ರಿಯೆ ಶೇ.80ರಷ್ಟು ಪೂರ್ಣಗೊಂಡಿದ್ದು, ಇನ್ನೂ



ಶೇ.20ರಷ್ಟು ಗ್ರಾಹಕರು ನೋಂದಣಿ ಮಾಡಿಕೊಳ್ಳುವುದು ಬಾಕಿ ಉಳಿದಿದೆ. ಗೃಹಜ್ಯೋತಿ ಯೋಜನೆಗೆ ನೋಂದಣಿ ಮಾಡಿಕೊಳ್ಳದಿರುವ ಅರ್ಹ ಗ್ರಾಹಕರಿಗೆ ಮತ್ತೊಂದು ಅವಕಾಶ ಕಲ್ಪಿಸಿರುವ ಸರ್ಕಾರ, ನೋಂದಣಿ ಪ್ರಕ್ರಿಯೆಯನ್ನು ಇದೇ ತಿಂಗಳ 30ರವರೆಗೆ ವಿಸ್ತರಿಸಿದೆ. ನೋಂದಣಿ ಬಾಕಿ ಉಳಿಸಿಕೊಂಡಿರುವ ಗ್ರಾಹಕರ ಮನೆಗಳಿಗೆ ಎಸ್ಕಾಂ ಸಿಬ್ಬಂದಿ ಭೇಟಿ ನೀಡಿ ಮಾಹಿತಿ ನೀಡುತ್ತಿದ್ದಾರೆ. ಸಿಬ್ಬಂದಿ ಮನೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಅಗತ್ಯ ದಾಖಲೆಗಳನ್ನು ನೀಡಿ ನೋಂದಣಿ ಮಾಡಿಸಿಕೊಳ್ಳಬಹುದು. ಅಥವಾ ಸಂಬಂಧಪಟ್ಟ ವಿದ್ಯುತ್ ವಿಭಾಗದ ಕಚೇರಿಗೆ ಅಗತ್ಯ ದಾಖಲೆಗಳೊಂದಿಗೆ ತೆರಳಿ ನೋಂದಣಿ ಮಾಡಿಕೊಳ್ಳುವಂತೆ ಅಧಿಕಾರಿಗಳು ಮನವಿ ಮಾಡಿದ್ದಾರೆ. ಗೃಹಜ್ಯೋತಿ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಾಗಿದ್ದು, ಇನ್ನೂ ನೋಂದಣಿ ಮಾಡಿಕೊಳ್ಳದಿರುವ ಗ್ರಾಹಕರು ಸರ್ಕಾರ ನೀಡಿರುವ ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಂಇಇ ಅಧಿಕಾರಿ ಮನವಿ ಮಾಡಿದ್ದಾರೆ...

ವರದಿ: ಎಂ.ಡಿ.ನಾಸೀರ್ ಅರಸೀಕೆರೆ

# ಮಳಲಿ ಲಕ್ಷ್ಮೀದೇವಿ ದೇಗುಲದ ಆಡಳಿತಕ್ಕೆ ಹೊಸ ನಿಯಮಾವಳಿ : ಜಗದೀಶ್ ಗಂಗಣ್ಣನವರ್

ಮುಂಜಾನೆವಾರ್ತೆ ಹಾಸನ: ಹೊಳೆನರಸೀಪುರ ತಾಲ್ಲೂಕಿನ ಹಳೇಕೋಟೆ ಹೋಬಳಿಯ ಮಳಲಿ ಗ್ರಾಮದ ಶ್ರೀ ಲಕ್ಷ್ಮೀದೇವಿ ದೇವಾಲಯದ ಆಡಳಿತ ಮತ್ತು ಪೂಜಾ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರಲು ಹಲವು ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.



ದೇವಸ್ಥಾನದ ಪಾವಿತ್ರ್ಯಕ್ಕೆ ಧಕ್ಕೆ ಉಂಟಾಗದಂತೆ ಆವರಣದ ಚಟುವಟಿಕೆಗಳ ಮೇಲೆ ನಿಗಾ ವಹಿಸುವುದರ ಜೊತೆಗೆ ಅರ್ಚಕರ ನೇಮಕ ಹಾಗೂ ಕಾಣಿಕೆ ನಿರ್ವಹಣೆಯನ್ನು ನಿಯಮ ಬದ್ಧಗೊಳಿಸಲಾಗುವುದು ಎಂದು ಉಪವಿಭಾಗಾಧಿಕಾರಿ ಜಗದೀಶ್ ಗಂಗಣ್ಣ ತಿಳಿಸಿದರು.

ಜಿಲ್ಲಾ ಉಪವಿಭಾಗಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಾಧ್ಯಮದವರಿಗೆ ಮಾಹಿತಿ ನೀಡಿದ ಅವರು, ದೇವಸ್ಥಾನದ ಅರ್ಚಕರ ನೇಮಕ ಹಾಗೂ ಪೂಜಾ ಕಾರ್ಯಕ್ಕೆ ಸಂಬಂಧಿಸಿದಂತೆ ಈಗಾಗಲೇ ದೇವಸ್ಥಾನದ ಆವರಣದಲ್ಲಿ ಅರ್ಚಕರು ಮತ್ತು ಗ್ರಾಮಸ್ಥರ ಸಮ್ಮುಖದಲ್ಲಿ ಸಭೆ ನಡೆಸಿ ಅಗತ್ಯ ಸೂಚನೆಗಳನ್ನು ನೀಡಲಾಗಿದೆ. ವಂಶಪಾರಂಪರ್ಯವಾಗಿ ಸೇವೆ ಸಲ್ಲಿಸುತ್ತಿದ್ದ 24 ಅರ್ಚಕರ ಪೈಕಿ ಕೆಲವರು ಮೃತಪಟ್ಟಿದ್ದು, ಉಳಿದ ಅರ್ಚಕರು ಹಾಗೂ ಮೃತರ ವಾರಸುದಾರರ ಅರ್ಹತೆ ಮತ್ತು ಕಾನೂನುಬದ್ಧ ವಾರಸುದಾರಿಕೆಯನ್ನು ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು. ಅರ್ಹ ದಾಖಲೆಗಳನ್ನು ಸಲ್ಲಿಸಲು ಸಂಬಂಧಪಟ್ಟವರಿಗೆ ಕಾಲಾವಕಾಶ ನೀಡಲಾಗಿದೆ. ಸರ್ಕಾರದ ಆದೇಶ, ಸುತ್ತೋಲೆ ಹಾಗೂ ನಿಯಮಗಳನ್ನು ಉಲ್ಲಂಘಿಸಿ ದೇವಸ್ಥಾನದ ಪೂಜಾ ವ್ಯವಸ್ಥೆಯಲ್ಲಿ ಯಾರಾದರೂ ನಡೆದುಕೊಂಡರೆ ಅವರ ವಿರುದ್ಧ ನಿಯಮಾನುಸಾರ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು. ದೇವಸ್ಥಾನದ ಆವರಣದಲ್ಲಿ ಆನ್‌ಲೈನ್ ಸಿಸಿಟಿವಿ ವ್ಯವಸ್ಥೆ ಅಳವಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ದೇವಸ್ಥಾನದಲ್ಲಿ ನಡೆಯುವ ಚಟುವಟಿಕೆಗಳ ಮೇಲೆ ನಿರಂತರ ನಿಗಾ ಇರಲಿದ್ದು, ಅಗತ್ಯ ಸಂದರ್ಭದಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಸ್ಥಳೀಯ ಪೊಲೀಸ್ ಠಾಣೆಯವರು ದೃಶ್ಯಾವಳಿಗಳನ್ನು ಪರಿಶೀಲಿಸಲು ಸಾಧ್ಯವಾಗುವಂತೆ ವ್ಯವಸ್ಥೆ ಮಾಡಲಾಗುವುದು. ನಿಯಮ ಉಲ್ಲಂಘನೆ ಅಥವಾ ಅಹಿತಕರ ಚಟುವಟಿಕೆ ಕಂಡುಬಂದರೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ದೇವಸ್ಥಾನಕ್ಕೆ ಭಕ್ತರು ನೀಡುವ ಕಾಣಿಕೆಗಳ ಸಂಗ್ರಹ ಮತ್ತು ನಿರ್ವಹಣೆಯಲ್ಲೂ ಪಾರದರ್ಶಕತೆ ತರಲು ನಿರ್ಧರಿಸಲಾಗಿದೆ. ಕಾಣಿಕೆ ಸಂಗ್ರಹ ಸಂದರ್ಭದಲ್ಲಿ ಸಂಬಂಧಪಟ್ಟ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಪ್ರತಿನಿಧಿಗಳು ಹಾಗೂ ಸಮಿತಿಯ ಸದಸ್ಯರು ಉಪಸ್ಥಿತರಿರುವ ವ್ಯವಸ್ಥೆ ಮಾಡಲಾಗುವುದು. ಸಂಗ್ರಹವಾದ ಕಾಣಿಕೆಗಳ ವಿವರವನ್ನು ರಿಜಿಸ್ಟರ್‌ನಲ್ಲಿ ದಾಖಲಿಸಿ, ಭಕ್ತರಿಗೆ ರಸೀದಿ ನೀಡಲಾಗುವುದು.

ಪ್ರತಿ ತಿಂಗಳು ದೇವಸ್ಥಾನದ ಆದಾಯ ಮತ್ತು ವೆಚ್ಚದ ಲೆಕ್ಕಪತ್ರವನ್ನು ಪರಿಶೀಲಿಸಿ, ಅದರ ವಿವರವನ್ನು ಗ್ರಾಮಸ್ಥರ ಮುಂದಿಡುವ ವ್ಯವಸ್ಥೆ ಮಾಡಲಾಗುವುದು. ದೇವಸ್ಥಾನದ ಹಣಕಾಸು ವ್ಯವಹಾರಗಳು ಸಾರ್ವಜನಿಕವಾಗಿ ಸ್ಪಷ್ಟವಾಗಿರಬೇಕು ಎಂಬ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು. ಅರ್ಹ ಅರ್ಚಕರ ಪಟ್ಟಿಯನ್ನು ಸಿದ್ಧಪಡಿಸಿದ ಬಳಿಕ ನಿಗದಿತ ಸಂಖ್ಯೆಯ ಅರ್ಚಕರನ್ನು ಆಯ್ಕೆ ಮಾಡುವ ವ್ಯವಸ್ಥೆ ಜಾರಿಗೆ ತರಲಾಗುವುದು. ಈ ಪ್ರಕ್ರಿಯೆಯನ್ನು ಗ್ರಾಮ ಪಂಚಾಯಿತಿ ಸೇರಿದಂತೆ ಸಂಬಂಧಪಟ್ಟವರ ಸಮ್ಮುಖದಲ್ಲಿ ನಡೆಸಿ ಪಾರದರ್ಶಕತೆ ಕಾಪಾಡಲಾಗುವುದು ಎಂದು ಉಪವಿಭಾಗಾಧಿಕಾರಿ ಹೇಳಿದರು. ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಅಗತ್ಯ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಮೂಲಸೌಕರ್ಯ ಅಭಿವೃದ್ಧಿಗೂ ಆದ್ಯತೆ ನೀಡಲಾಗುತ್ತಿದೆ. ದೇವಸ್ಥಾನದ ಆವರಣದಲ್ಲಿ ಹೈಟೆಕ್ ಶೌಚಾಲಯ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲು ಅಂದಾಜು ಸಿದ್ಧಪಡಿಸಲಾಗಿದ್ದು, ಜಿಲ್ಲಾಮಟ್ಟದಲ್ಲಿ ಅನುಮೋದನೆ ಪಡೆಯುವ ಪ್ರಕ್ರಿಯೆ ನಡೆಯುತ್ತಿದೆ. ದೇವಸ್ಥಾನದ ಸ್ವಚ್ಛತೆ ಹಾಗೂ ಪರಿಸರ ಸಂರಕ್ಷಣೆಯ ಮೇಲೂ ಗಮನ ಹರಿಸಲಾಗುವುದು ಎಂದರು. ಅರ್ಚಕರು, ಗ್ರಾಮಸ್ಥರು ಹಾಗೂ ಗ್ರಾಮ ಪಂಚಾಯಿತಿ ಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಅವರ ಅಭಿಪ್ರಾಯಗಳನ್ನು ಪಡೆಯಲಾಗಿದೆ. ದೇವಸ್ಥಾನದ ಪಾವಿತ್ರ್ಯ, ಆಡಳಿತದ ಶಿಸ್ತು, ಭಕ್ತರಿಗೆ ಉತ್ತಮ ಸೇವೆ ಹಾಗೂ ಗ್ರಾಮಸ್ಥರ ಭಾವನೆಗಳಿಗೆ ಗೌರವ ನೀಡುವ ಉದ್ದೇಶದಿಂದ ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ದೇವಸ್ಥಾನದ ಅಭಿವೃದ್ಧಿಗೆ ಗ್ರಾಮಸ್ಥರ ಸಹಕಾರವೂ ಅಗತ್ಯವಾಗಿದ್ದು, ಎಲ್ಲರ ಸಹಭಾಗಿತ್ವದೊಂದಿಗೆ ವ್ಯವಸ್ಥೆಯನ್ನು ಸುಧಾರಿಸಲಾಗುವುದು ಎಂದು ಉಪವಿಭಾಗಾಧಿಕಾರಿ ಜಗದೀಶ್ ಗಂಗಣ್ಣ ತಿಳಿಸಿದರು.

ವರದಿ : ಯತೀಶ್ ಶೆಟ್ಟಿಹಳ್ಳಿ ಹಾಸನ

# ಪರಪ್ಪನ ಅಗ್ರಹಾರ ಜೈಲಿನಲ್ಲಿ ನವ ಸಂಕಲ್ಪ ಬೇಕರಿ ಆರಂಭ: ಸಾರ್ವಜನಿಕ ಸ್ಥಳಗಳಲ್ಲಿ ಉತ್ಪನ್ನಗಳ ಮಾರಾಟಕ್ಕೆ ನಿರ್ಧಾರ

ಬೆಂಗಳೂರು: ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದ ಕೈದಿಗಳ ಪುನರ್ವಸತಿ ಮತ್ತು ಕೌಶಲ್ಯಾಭಿವೃದ್ಧಿಗಾಗಿ ಕರ್ನಾಟಕ ಕಾರಾಗೃಹ ಇಲಾಖೆಯು ಪರಪ್ಪನ ಅಗ್ರಹಾರ ಜೈಲಿನಲ್ಲಿ ನವ ಸಂಕಲ್ಪ ಬೇಕರಿ ಆರಂಭಿಸಿದ್ದು, ಕಾರಾಗೃಹ ಡಿಜಿಪಿ ಅಲೋಕ್ ಕುಮಾರ್ ಇದರ ಲೋಕಾರ್ಪಣೆ ನೆರವೇರಿಸಿದ್ದಾರೆ. ಇದೇ ವೇಳೆ ನವ ಸಂಕಲ್ಪ ಬೇಕರಿ ಆನ್ ವೀಲ್ಸ್‌ಗೂ ಚಾಲನೆ ನೀಡಲಾಗಿದೆ. ಹೊಸ ಸಜಾ ಬಂಧಿಗಳಿಗೆ ಬೇಕರಿ ಉತ್ಪನ್ನ ತಯಾರಿಕೆ ತರಬೇತಿ ನೀಡಲಾಗಿದ್ದು, ತರಬೇತಿ ಪೂರ್ಣಗೊಳಿಸಿದ ಬಂಧಿಗಳಿಗೆ ಪ್ರಮಾಣ ಪತ್ರ ವಿತರಣೆ ಕಾರ್ಯಕ್ರಮವೂ ನಡೆದಿದೆ. ಬೆಂಗಳೂರು ವಿವಿಧ ನ್ಯಾಯಾಲಯಗಳ ಆವರಣ, ಬಸ್ ನಿಲ್ದಾಣಗಳಲ್ಲಿ ಬೇಕರಿ ಆನ್ ವೀಲ್ಸ್ ಮೂಲಕ ಬೇಕರಿ ಉತ್ಪನ್ನಗಳ ಮಾರಾಟಕ್ಕೆ ನಿರ್ಧರಿಸಲಾಗಿದ್ದು, ಆ ಮೂಲಕ ಆದಾಯ ಹೆಚ್ಚಿಸುವ ಉದ್ದೇಶ ಹೊಂದಲಾಗಿದೆ. ಜೈಲಿನಿಂದ ರಿಲೀಸ್ ಬಳಿಕವೂ ಬಂಧಿಗಳು ಸ್ವಾವಲಂಬಿ ಜೀವನ ನಡೆಸಲು ಇದು ಸಹಾಯ ಆಗಲಿದೆ. 2026ರ ಗಣರಾಜ್ಯೋತ್ಸವದ ಅಂಗವಾಗಿ ಬೆಂಗಳೂರಿನ ಮಾಣಿಕ್ ಶಾ ಪರೇಡ್ ಮೈದಾನದಲ್ಲಿ ನಡೆದ ಮುಖ್ಯ ಸಮಾರಂಭದಲ್ಲಿ, ರಾಜ್ಯಪಾಲರು ಸೇರಿದಂತೆ ಹಲವು ಗಣ್ಯರಿಗೆ ಕೈದಿಗಳು ತಯಾರಿಸಿದ ತಿಂಡಿ-ತಿನಿಸುಗಳನ್ನು ಉಪಹಾರವಾಗಿ ಉಣಬಡಿಸಲಾಗಿತ್ತು.

Printed by : H.L.AMARANATH, Owned by: H.L.AMARANATH, Printed at : SREE MANJUNATHA ENTERPRISES No. 7, Tirugappa lane, Cottonpet cross, Cottonpet, Bangalore-560053.
Published at : No.97, 2nd Cross, Vivekanandanagar, Khadi Commission Layout, BSK 3rd Stage, Kathariguppe Main Road, Bengaluru-560085. Mobile: 9663122276 Editor : H.L.AMARANATH